ಸತ್ಯ ಮತ್ತು ಧೈರ್ಯದ ಧ್ವನಿ

# ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: 04 Vol: 04 | ಸಂಚಿಕೆ: 121 Issue: 121 | ರಾಯಚೂರು Raichur | 23-10-2026 | ಶುಕ್ರವಾರ Friday | ಪುಟ : 04 Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com

ಸಂಪಾದಕರು : ಗುರುರಾಜ ಕೆ
Editor: Gururaja K 98863 85685




## ಪಶ್ಚಿಮ ಏಷ್ಯಾದ ಬೆಳವಣಿಗೆಗಳ ಕುರಿತು ಮೋದಿ-ನೆತನ್ಯಾಹು ಚರ್ಚೆ: ಇಸ್ರೇಲ್‌ಗೆ ಭೇಟಿ ನೀಡಲು ಆಹ್ವಾನ

ನವದೆಹಲಿ: ಪಶ್ಚಿಮ ಏಷ್ಯಾದಲ್ಲಿ ಉಂಟಾಗಿರುವ ಇತ್ತೀಚಿನ ಬೆಳವಣಿಗೆಗಳ ಕುರಿತು ಪ್ರಧಾನಿ ನರೇಂದ್ರ ಮೋದಿ ಹಾಗೂ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಗುರುವಾರ ದೂರವಾಣಿ ಮೂಲಕ ಚರ್ಚಿಸಿದ್ದು, ಈ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆಯನ್ನು ಶೀಘ್ರವಾಗಿ ಮರುಸ್ಥಾಪಿಸುವ ಅಗತ್ಯವನ್ನು ಪ್ರತಿಪಾದಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರಿಗೆ ಇಸ್ರೇಲ್ ಪ್ರಧಾನಿ ನೆತನ್ಯಾಹು ದೂರವಾಣಿ ಕರೆ ಮಾಡಿದ್ದು, ಉಭಯ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳು ಹಾಗೂ ಪ್ರಾದೇಶಿಕ ಬೆಳವಣಿಗೆಗಳ ಕುರಿತು ಮಾತುಕತೆ ನಡೆಸಿದ್ದಾರೆ. ಭಾರತ ಮತ್ತು ಇಸ್ರೇಲ್ ನಡುವಿನ ವಿಶೇಷ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಬದ್ಧತೆಯನ್ನು ಇಬ್ಬರೂ ನಾಯಕರು ಪುನರುಚ್ಚರಿಸಿದ್ದಾರೆ ಎಂದು ಪ್ರಧಾನಮಂತ್ರಿ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಪ್ರಧಾನಿ ಮೋದಿ, ಇಸ್ರೇಲ್ ಪ್ರಧಾನಿ ನೆತನ್ಯಾಹು ಅವರೊಂದಿಗೆ ಫಲಪ್ರದ ಮಾತುಕತೆ ನಡೆಸಿರುವುದಾಗಿ ತಿಳಿಸಿದ್ದಾರೆ. ಉಭಯ ದೇಶಗಳ ನಡುವಿನ ಸಂಬಂಧಗಳ ಪ್ರಗತಿಯನ್ನು ಪರಿಶೀಲಿಸಿದ್ದು, ಸಹಕಾರವನ್ನು ಮತ್ತಷ್ಟು ವಿಸ್ತರಿಸುವ ಕುರಿತು ಚರ್ಚಿಸಲಾಗಿದೆ. ಪಶ್ಚಿಮ ಏಷ್ಯಾದಲ್ಲಿ ಶಾಂತಿ ಹಾಗೂ ಸ್ಥಿರತೆ ಮರುಸ್ಥಾಪನೆಗೆ ತುರ್ತು ಕ್ರಮಗಳ ಅಗತ್ಯವಿದೆ ಎಂಬ ಅಭಿಪ್ರಾಯವನ್ನು ವ್ಯಕ್ತಪಡಿಸಿರುವುದಾಗಿ ಹೇಳಿದ್ದಾರೆ.



ಇದೇ ವೇಳೆ ಇಸ್ರೇಲ್‌ನ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಪ್ರಧಾನಿ ಮೋದಿ ಅವರಿಗೆ ನೆತನ್ಯಾಹು ಆಹ್ವಾನ ನೀಡಿದ್ದಾರೆ. ವಿಶೇಷವಾಗಿ ಆಯೋಜಿಸಲಿರುವ ದೀಪ ಬೆಳಗಿಸುವ ಸಮಾರಂಭದಲ್ಲಿ ಭಾರತೀಯ ಪೈಲಟ್ ಸ್ಮಿತ್ ಮಚ್ಚರ್ ಅವರನ್ನು ಗೌರವಿಸುವುದಾಗಿ ತಿಳಿಸಿರುವ ಅವರು, ಈ ಕಾರ್ಯಕ್ರಮದಲ್ಲಿ ಮೋದಿ ಭಾಗವಹಿಸಬೇಕೆಂದು ಕೋರಿದ್ದಾರೆ.

ತಮ್ಮ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ದೂರವಾಣಿ ಮಾತುಕತೆಯ ವಿವರ ಹಂಚಿಕೊಂಡಿರುವ ನೆತನ್ಯಾಹು, ಪ್ರಧಾನಿ ಮೋದಿ ತಮ್ಮ ಆಹ್ವಾನಕ್ಕೆ ಧನ್ಯವಾದ ತಿಳಿಸಿದ್ದಾರೆ ಎಂದು ಹೇಳಿದ್ದಾರೆ.

ಭಾರತ ಮತ್ತು ಇಸ್ರೇಲ್ ನಡುವಿನ ಸ್ನೇಹ ಸಂಬಂಧಗಳು ನಿರಂತರವಾಗಿ ಬಲಗೊಳ್ಳುತ್ತಿದ್ದು, ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿಯೂ ಎರಡೂ ದೇಶಗಳು ಪರಸ್ಪರ ಸಹಕಾರ ನೀಡುತ್ತಿವೆ ಎಂದು ನೆತನ್ಯಾಹು ಉಲ್ಲೇಖಿಸಿದ್ದಾರೆ.

ಪಶ್ಚಿಮ ಏಷ್ಯಾದಲ್ಲಿನ ಬೆಳವಣಿಗೆಗಳ ನಡುವೆಯೇ ನಡೆದಿರುವ ಈ ಮಾತುಕತೆಯಲ್ಲಿ ದ್ವಿಪಕ್ಷೀಯ ಸಂಬಂಧಗಳ ಬಲವರ್ಧನೆಯ ಜೊತೆಗೆ ಪ್ರಾದೇಶಿಕ ಶಾಂತಿ ಮತ್ತು ಸ್ಥಿರತೆಗೆ ಉಭಯ ನಾಯಕರು ಮಹತ್ವ ನೀಡಿದ್ದಾರೆ.

## ಥಾರ್-ಎಕ್ಸ್‌ಯುವಿ ಕಾರುಗಳ ಮುಖಾಮುಖಿ ಡಿಕ್ಕಿ: ಶಾಸಕರ ಸಂಬಂಧಿ ಸೇರಿ ಹಲವರಿಗೆ ಗಾಯ



ರಾಯಚೂರು: ಜಿಲ್ಲೆಯ ಲಿಂಗಸುಗೂರು ತಾಲೂಕಿನ ಹೊನ್ನಹಳ್ಳಿ ಗ್ರಾಮದ ಸಮೀಪ ಮಹೀಂದ್ರಾ ಥಾರ್ ಹಾಗೂ ಎಕ್ಸ್‌ಯುವಿ ಕಾರುಗಳ ನಡುವೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಹಲವರು ಗಾಯಗೊಂಡಿದ್ದು, ಇಬ್ಬರ ಸ್ಥಿತಿ ಗಂಭೀರವಾಗಿದೆ ಎಂದು ತಿಳಿದುಬಂದಿದೆ.

ಲಿಂಗಸುಗೂರು ವಿಧಾನಸಭಾ ಕ್ಷೇತ್ರದ ಶಾಸಕ ಮಾನಪ್ಪ ವಜ್ಜಲ್ ಅವರ ಕುಟುಂಬಕ್ಕೆ ಸೇರಿದ ಕಾರು ಅಪಘಾತಕ್ಕೀಡಾಗಿದ್ದು, ಶಾಸಕರ ಸಹೋದರನ ಪುತ್ರ ಮಲ್ಲೇಶ ಎಂಬುವವರು ತೀವ್ರವಾಗಿ ಗಾಯಗೊಂಡಿದ್ದಾರೆ ಎನ್ನಲಾಗಿದೆ.

ಹೊನ್ನಹಳ್ಳಿ ಗ್ರಾಮದ ಸಮೀಪ ಎರಡು ವಾಹನಗಳು ಎದುರುಬದುರಾಗಿ ಡಿಕ್ಕಿ ಹೊಡೆದ ಪರಿಣಾಮ ಕಾರುಗಳ ಮುಂಭಾಗ ಸಂಪೂರ್ಣ ಜಖಂಗೊಂಡಿದೆ. ಡಿಕ್ಕಿಯ ರಭಸಕ್ಕೆ ವಾಹನಗಳಲ್ಲಿದ್ದ ಹಲವರು ಗಾಯಗೊಂಡಿದ್ದು, ಅಪಘಾತದ ಸುದ್ದಿ ತಿಳಿದ ಸ್ಥಳೀಯರು ಕೂಡಲೇ ಸ್ಥಳಕ್ಕೆ ಧಾವಿಸಿ ಗಾಯಾಳುಗಳನ್ನು ರಕ್ಷಿಸಿ ಆಸ್ಪತ್ರೆಗೆ ಸಾಗಿಸಿದ್ದಾರೆ.

ಗಂಭೀರವಾಗಿ ಗಾಯಗೊಂಡವರನ್ನು ಪ್ರಾಥಮಿಕ ಚಿಕಿತ್ಸೆ ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿಗೆ ಕರೆದೊಯ್ಯಲಾಗಿದೆ. ಅಪಘಾತದಲ್ಲಿ ಯಾದಗಿರಿ ಮೂಲದ ಇಬ್ಬರಿಗೂ ತೀವ್ರ ಗಾಯಗಳಾಗಿವೆ 2ನೇ ಪುಟಕ್ಕೆ

## ಈಶಾನ್ಯ ಶಿಕ್ಷಕರ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವು ನಿಶ್ಚಿತ, ಬಿಜೆಪಿಗೆ ಸೋಲು ಖಚಿತ: ಎ. ವಸಂತಕುಮಾರ




ರಾಯಚೂರು: ಈಶಾನ್ಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರ ಅವರ ಗೆಲುವು ನಿಶ್ಚಿತವಾಗಿದ್ದು, ಈ ಬಾರಿ ಬಿಜೆಪಿ ಅಭ್ಯರ್ಥಿಗೆ ಸೋಲು ಖಚಿತ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷರು, ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ಉಸ್ತುವಾರಿ ಹಾಗೂ ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ ವಿಶ್ವಾಸ ವ್ಯಕ್ತಪಡಿಸಿದರು.

ಗುರುವಾರ ನಗರದ ಜಿಲ್ಲಾ ಕಾಂಗ್ರೆಸ್ ಸಮಿತಿ ಕಾರ್ಯಾಲಯದಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈಶಾನ್ಯ ಶಿಕ್ಷಕರ ಕ್ಷೇತ್ರದ ಏಳು ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ವ್ಯಾಪಕ ಪ್ರಚಾರ ನಡೆಸಿದ್ದಾರೆ. ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ ಶಿಕ್ಷಕರು ಹಾಗೂ ಉಪನ್ಯಾಸಕರ ಸಮಸ್ಯೆಗಳನ್ನು ಆಲಿಸುವುದರ ಜೊತೆಗೆ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರ ಅವರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡುವಂತೆ ಮನವಿ ಮಾಡಲಾಗಿದೆ ಎಂದರು.

ಕಳೆದ ಚುನಾವಣೆಯಲ್ಲಿ ಸೋಲು ಅನುಭವಿಸಿದರೂ ಶರಣಪ್ಪ ಮಟ್ಟೂರ ಅವರು ಶಿಕ್ಷಕರ ಸಂಪರ್ಕವನ್ನು ಕಳೆದುಕೊಂಡಿಲ್ಲ. ಕಳೆದ ಐದು ವರ್ಷಗಳಲ್ಲಿ ಸುಮಾರು 4,500 ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ ಶಿಕ್ಷಕರು ಹಾಗೂ ಉಪನ್ಯಾಸಕರ ಸಮಸ್ಯೆಗಳನ್ನು ಆಲಿಸಿದ್ದಾರೆ. ಅವರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಶಿಕ್ಷಕರ ವಿಶ್ವಾಸ ಗಳಿಸಿದ್ದಾರೆ. ಹೀಗಾಗಿ ಈ ಬಾರಿ ಮತದಾರರು ಅವರನ್ನು ಬೆಂಬಲಿಸಲಿದ್ದಾರೆ ಎಂದು ಹೇಳಿದರು.

ಶಿಕ್ಷಕರ ಬಹುದಿನಗಳ ಬೇಡಿಕೆಯಾಗಿರುವ ರಾಷ್ಟ್ರೀಯ ಪಿಂಚಣಿ ಯೋಜನೆ (ಎನ್‌ಪಿಎಸ್) ಬದಲಿಗೆ ಹಳೆಯ ಪಿಂಚಣಿ ಯೋಜನೆ (ಒಪಿಎಸ್) ಜಾರಿಗೊಳಿಸುವ ವಿಷಯದಲ್ಲಿ 2ನೇ ಪುಟಕ್ಕೆ

## ಬಂಗಾರಪ್ಪ ಕೆರೆ ಅಭಿವೃದ್ಧಿಗೆ ₹100 ಕೋಟಿ ಯೋಜನೆ: ನೀರಿನ ಸಂಗ್ರಹ ಮಟ್ಟ ಪರಿಶೀಲಿಸಿದ ಶಾಸಕ ಬಸನಗೌಡ ದದ್ದಲ್



ರಾಯಚೂರು: ತಾಲೂಕಿನ ಕುಡಿಯುವ ನೀರು ಹಾಗೂ ರೈತರ ಕೃಷಿ ಚಟುವಟಿಕೆಗಳಿಗೆ ಪ್ರಮುಖ ಆಧಾರವಾಗಿರುವ ಬಂಗಾರಪ್ಪ ಕೆರೆಗೆ ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್ ಭೇಟಿ ನೀಡಿ, ಕೆರೆಯಲ್ಲಿನ ನೀರಿನ ಸಂಗ್ರಹ ಮಟ್ಟ ಹಾಗೂ ಪ್ರಸ್ತುತ ಸ್ಥಿತಿಗತಿಗಳನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಬಂಗಾರಪ್ಪ ಕೆರೆಯಲ್ಲಿ ಪ್ರಸ್ತುತ 16 ಅಡಿ ನೀರು ಸಂಗ್ರಹವಿದ್ದು, ರೈತರ ಹಿತದೃಷ್ಟಿಯಿಂದ ಮೇಲ್ಭಾಗ ಹಾಗೂ ಕೆಳಭಾಗದ ಪ್ರದೇಶಗಳಿಗೆ ಸಮಾನವಾಗಿ ನೀರು ಹಂಚಿಕೆ ಮಾಡುವುದು ಅಗತ್ಯವಾಗಿದೆ. ವಿಶೇಷವಾಗಿ 98, 99, 99ಎ, 100, 102 ಹಾಗೂ 102ಎ ವಿತರಣಾ ಕಾಲುವೆಗಳ ವ್ಯಾಪ್ತಿಯ ರೈತರಿಗೆ ಸಮರ್ಪಕವಾಗಿ ನೀರು ತಲುಪಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಈಗಾಗಲೇ ಸುಮಾರು ₹200 ಕೋಟಿ ವೆಚ್ಚದಲ್ಲಿ ಕೃಷ್ಣಾ ನದಿಯಿಂದ ಏತ ನೀರಾವರಿ ಯೋಜನೆಯ ಮೂಲಕ ಬಂಗಾರಪ್ಪ ಕೆರೆಗೆ ನೀರು ತುಂಬಿಸುವ ಯೋಜನೆಯನ್ನು ಕೈಗೊಳ್ಳಲಾಗಿದೆ. ಇದರಿಂದ ರೈತರಿಗೆ ಕೃಷಿ ಚಟುವಟಿಕೆಗಳಿಗೆ ಅಗತ್ಯವಾದ ನೀರು ಒದಗಿಸುವುದರ ಜೊತೆಗೆ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಸಹಕಾರಿಯಾಗಲಿದೆ ಎಂದು ಹೇಳಿದರು.

ಇತ್ತೀಚೆಗೆ ನಡೆದ ಐಸಿಸಿ ಸಭೆಯ ಸೂಚನೆಗಳ ಅನ್ವಯ ಮುಂದಿನ ಕೆಲವು ದಿನಗಳಲ್ಲಿ ಕೆಳಭಾಗದ ಪ್ರದೇಶಗಳಿಗೆ ಮತ್ತೊಮ್ಮೆ ನೀರು ಹರಿಸಲಾಗುವುದು. ನೀರಿನ 2ನೇ ಪುಟಕ್ಕೆ

## ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ: ಮತಗಟ್ಟೆಗಳ ಸಿದ್ಧತೆ ಪರಿಶೀಲಿಸಿದ ಜಿಲ್ಲಾಧಿಕಾರಿ ಪೂವಿತಾ ಎಸ್.




ರಾಯಚೂರು: ಕರ್ನಾಟಕ ವಿಧಾನ ಪರಿಷತ್‌ನ ಈಶಾನ್ಯ ಶಿಕ್ಷಕರ ಕ್ಷೇತ್ರದ ಒಂದು ಸ್ಥಾನಕ್ಕೆ ಅಕ್ಟೋಬರ್ 23ರಂದು ನಡೆಯಲಿರುವ ಮತದಾನದ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿ ಪೂವಿತಾ ಎಸ್. ಅವರು ಗುರುವಾರ ಜಿಲ್ಲೆಯ ವಿವಿಧ ಮತಗಟ್ಟೆಗಳಿಗೆ ಭೇಟಿ ನೀಡಿ ಚುನಾವಣಾ ಪೂರ್ವಸಿದ್ಧತೆಗಳನ್ನು ಪರಿಶೀಲಿಸಿದರು.

ಜಿಲ್ಲೆಯ ಗಬ್ಬೂರು, ಜಾಲಹಳ್ಳಿ ಹಾಗೂ ದೇವದುರ್ಗ ಸೇರಿದಂತೆ ವಿವಿಧ ಮತದಾನ ಕೇಂದ್ರಗಳಿಗೆ ಭೇಟಿ ನೀಡಿದ ಅವರು, ಮತದಾನಕ್ಕೆ ಕೈಗೊಂಡಿರುವ ವ್ಯವಸ್ಥೆಗಳ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಸಿಬ್ಬಂದಿಯಿಂದ ಮಾಹಿತಿ ಪಡೆದರು.

ಮತದಾನ ಪ್ರಕ್ರಿಯೆ ಸುಸೂತ್ರವಾಗಿ ನಡೆಯಲು ಅಗತ್ಯವಿರುವ ಎಲ್ಲ ಸಿದ್ಧತೆಗಳನ್ನು ಮುಂಚಿತವಾಗಿಯೇ ಪೂರ್ಣಗೊಳಿಸಬೇಕು. ಮತದಾನದ ದಿನ ಯಾವುದೇ ರೀತಿಯ ತಾಂತ್ರಿಕ ಅಥವಾ ಆಡಳಿತಾತ್ಮಕ ಸಮಸ್ಯೆಗಳು ಎದುರಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಮತಗಟ್ಟೆಗಳಲ್ಲಿ ಮತದಾರರಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವುದರ ಜೊತೆಗೆ ಚುನಾವಣಾ ಕರ್ತವ್ಯಕ್ಕೆ ನಿಯೋಜಿತ ಸಿಬ್ಬಂದಿ ತಮ್ಮ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಮತದಾನ ಪ್ರಕ್ರಿಯೆಯಲ್ಲಿ ಯಾವುದೇ ಗೊಂದಲಕ್ಕೆ ಅವಕಾಶ ನೀಡದೆ ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ತಿಳಿಸಿದರು.

ಜಿಲ್ಲೆಯ ಎಲ್ಲ ಮತದಾನ ಕೇಂದ್ರಗಳಲ್ಲಿ ಅಗತ್ಯ ವ್ಯವಸ್ಥೆಗಳನ್ನು ಖಚಿತಪಡಿಸಿಕೊಂಡು, ಅಕ್ಟೋಬರ್ 23ರಂದು ನಡೆಯಲಿರುವ ಮತದಾನವು ಶಾಂತಿಯುತವಾಗಿ ಹಾಗೂ 2ನೇ ಪುಟಕ್ಕೆ

## ಎಚ್.ಡಿ. ಕುಮಾರಸ್ವಾಮಿ ವಿರುದ್ಧ ಟೀಕೆ ಮಾಡುವ ಬದಲು ಕ್ಷೇತ್ರದ ಅಭಿವೃದ್ಧಿಗೆ ಗಮನಹರಿಸಿ: ನರಸಪ್ಪ ಆಶಾಪುರ



ರಾಯಚೂರು: ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ವಿರುದ್ಧ ಅನಗತ್ಯ ಹೇಳಿಕೆ ನೀಡುವುದನ್ನು ಬಿಟ್ಟು ತಮ್ಮ ಕ್ಷೇತ್ರದಲ್ಲಿನ ದಲಿತರ ಸಮಸ್ಯೆಗಳ ಪರಿಹಾರಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಗಮನಹರಿಸಬೇಕು ಎಂದು ಜೆಡಿಎಸ್ ಪರಿಶಿಷ್ಟ ಜಾತಿ ಘಟಕದ ಜಿಲ್ಲಾಧ್ಯಕ್ಷ ನರಸಪ್ಪ ಆಶಾಪುರ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಿಯಾಂಕ್ ಖರ್ಗೆ ಅವರು ಕುಮಾರಸ್ವಾಮಿ ಅವರ ವಿರುದ್ಧ ಪದೇ ಪದೇ ಟೀಕೆ ಮಾಡುವ ಬದಲು ತಾವು ಪ್ರತಿನಿಧಿಸುವ ಕ್ಷೇತ್ರದ ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು. ಅವರ ಕ್ಷೇತ್ರದಲ್ಲಿಯೇ ದಲಿತರು ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದು, ಮೊದಲು ಅವುಗಳನ್ನು ಪರಿಹರಿಸಲು ಮುಂದಾಗಬೇಕು ಎಂದು ಒತ್ತಾಯಿಸಿದರು.

ರಾಯಚೂರು ಜಿಲ್ಲೆಯಲ್ಲಿ ದಲಿತರ ಹತ್ಯೆ ಪ್ರಕರಣಗಳು ನಡೆದಿದ್ದರೂ ಸಚಿವ ಪ್ರಿಯಾಂಕ್ ಖರ್ಗೆ ಅವರು ಜಿಲ್ಲೆಗೆ ಭೇಟಿ ನೀಡಿ ಸಂತ್ರಸ್ತ ಕುಟುಂಬಗಳಿಗೆ ಸಾಂತ್ವನ ಹೇಳುವ ಕೆಲಸ ಮಾಡಿಲ್ಲ ಎಂದು ಆರೋಪಿಸಿದರು. ದಲಿತರ ಹಿತಾಸಕ್ತಿಯ ಬಗ್ಗೆ ಮಾತನಾಡುವವರು ಸಂಕಷ್ಟದಲ್ಲಿರುವ ಕುಟುಂಬಗಳ ನೆರವಿಗೆ ನಿಲ್ಲಬೇಕು ಎಂದರು.

ತಂದೆಯ ರಾಜಕೀಯ ಹಿನ್ನೆಲೆಯಿಂದ ಉನ್ನತ ಸ್ಥಾನ ಪಡೆದಿರುವ ಪ್ರಿಯಾಂಕ್ ಖರ್ಗೆ ಅವರು ತಮ್ಮ ಹುದ್ದೆಯ ಘನತೆ ಕಾಪಾಡಿಕೊಳ್ಳಬೇಕು. ಹಿರಿಯ ರಾಜಕೀಯ ನಾಯಕರ ಕುರಿತು ಮಾತನಾಡುವಾಗ ಜವಾಬ್ದಾರಿಯುತವಾಗಿ 2ನೇ ಪುಟಕ್ಕೆ

## ಅಂಬಾ ಮಠದ ವಿರುದ್ಧ ಅಪಪ್ರಚಾರಕ್ಕೆ ಮಹಿಳಾ ಭಕ್ತರ ಆಕ್ರೋಶ



ರಾಯಚೂರು: ಅರಕೇರಾ ತಾಲೂಕಿನ ಮದರಕಲ್ ಗ್ರಾಮದ ಶ್ರೀ ಅವಧೂತ ರಾಜಯೋಗಿ ಸಂತ ನಾಮದೇವಗೌಡ ಶರಣರ ಅಂಬಾ ಮಠದ ವಿರುದ್ಧ ಕೆಲವರು ರಾಜಕೀಯ ದುರುದ್ದೇಶದಿಂದ ಆಧಾರರಹಿತ ಆರೋಪಗಳನ್ನು ಮಾಡುತ್ತಿದ್ದಾರೆ ಎಂದು ಮಠದ ಮಹಿಳಾ ಭಕ್ತರು ಆರೋಪಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವಿಜಯರಾಣಿ, ಹನುಮಗೌಡ ಹಾಗೂ ಸಿದ್ದನಗೌಡ ಮೂಡಲಗುಂಡ ನೇತೃತ್ವದ ಕೆಲವರು ಶ್ರೀಶೈಲ ಭಕ್ತರ ಸಂಚಾಲಕರ ಸಮಿತಿ ಹೆಸರಿನಲ್ಲಿ ಮಠದ ಗೌರವಕ್ಕೆ ಧಕ್ಕೆ ತರುತ್ತಿದ್ದಾರೆ ಎಂದು ದೂರಿದರು.

ಹನುಮಗೌಡ ಈ ಹಿಂದೆ ನಾಮದೇವಗೌಡ ಶರಣರ ಶಿಷ್ಯನಾಗಿ ಮಠದ ಚಟುವಟಿಕೆಗಳಲ್ಲಿ ಭಾಗವಹಿಸುತ್ತಿದ್ದರು. ಆದರೆ ಇದೀಗ ಗುರುಗಳಿಂದ ಹಣಕ್ಕೆ ಬೇಡಿಕೆಯಿಟ್ಟು, ಅವರ ಪ್ರವಚನದ ವಿಡಿಯೊವನ್ನು ತಿರುಚಿ ಸಾಮಾಜಿಕ ಜಾಲತಾಣಗಳಲ್ಲಿ ಹರಡುವುದಾಗಿ ಬೆದರಿಸಿ ₹20 ಲಕ್ಷಕ್ಕೆ ಬೇಡಿಕೆ ಇಟ್ಟಿದ್ದಾರೆ ಎಂದು ಗಂಭೀರ ಆರೋಪ ಮಾಡಿದರು.

ಮಹಿಳಾ ಭಕ್ತರ ಒತ್ತಾಯದ ಮೇರೆಗೆ ಗುರುಗಳು ಭಜನಾ ಪದವೊಂದರ ಅರ್ಥವನ್ನು ಗ್ರಾಮೀಣ ಭಾಷೆಯಲ್ಲಿ ವಿವರಿಸಿದ್ದರು. ಅದರ ಒಂದು ಭಾಗವನ್ನು ಮಾತ್ರ ಕತ್ತರಿಸಿ ತಪ್ಪಾಗಿ ಬಿಂಬಿಸಲು ಯತ್ನಿಸಲಾಗುತ್ತಿದೆ ಎಂದು ತಿಳಿಸಿದರು.

ಅಂಬಾ ಮಠವು ಜಾತಿ, ಧರ್ಮದ ಭೇದವಿಲ್ಲದೆ ಸರ್ವಧರ್ಮ ಸಾಮೂಹಿಕ ವಿವಾಹ, ಮಹಿಳೆಯರಿಗೆ ಉಡಿ ತುಂಬುವ 2ನೇ ಪುಟಕ್ಕೆ

## ಭತ್ತದ ಗದ್ದೆಯಲ್ಲಿ ಮೊಸಳೆ ಪ್ರತ್ಯ



ಜಾಲಹಳ್ಳಿ, ಅ.22: ಸಮೀಪದ ಲಿಂಗದಹಳ್ಳಿ ಗ್ರಾಮದ ಭತ್ತದ ಗದ್ದೆಯೊಂದರಲ್ಲಿ ಮೊಸಳೆ ಕಾಣಿಸಿಕೊಂಡಿದ್ದು, ಅದರ ಚಲನವಲನದಿಂದ ಭತ್ತದ ಬೆಳೆ ಹಾನಿಗೊಳಗಾದ ಘಟನೆ ನಡೆದಿದೆ.

ಗ್ರಾಮದ ಸಮೀಪ ಹರಿಯುವ ಕೃಷ್ಣಾ ನದಿಯಿಂದ ಬಂದಿರುವ ಮೊಸಳೆ ಭತ್ತದ ಗದ್ದೆಗೆ ನುಗ್ಗಿದೆ ಎನ್ನಲಾಗಿದೆ. ಗದ್ದೆಯಲ್ಲಿ ಮೊಸಳೆ ಕಾಣಿಸಿಕೊಂಡಿದ್ದರಿಂದ ರೈತರು ಆತಂಕಕ್ಕೀಡಾಗಿದ್ದು, ಕೃಷಿ ಚಟುವಟಿಕೆಗಳಿಗೆ ತೊಂದರೆ ಉಂಟಾಗಿದೆ. ಅಲ್ಲದೆ, ಮೊಸಳೆಯ ಓಡಾಟದಿಂದ ಗದ್ದೆಯಲ್ಲಿದ್ದ ಭತ್ತದ ಬೆಳೆ ಹಾನಿಗೊಳಗಾಗಿದೆ ಎಂದು ತಿಳಿದುಬಂದಿದೆ.

ಮೊಸಳೆ ಕಾಣಿಸಿಕೊಂಡಿರುವ ಮಾಹಿತಿ ತಿಳಿಯುತ್ತಿದ್ದಂತೆ ಅರಣ್ಯ ಇಲಾಖೆಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಕಾರ್ಯಾಚರಣೆ ನಡೆಸಿ ಮೊಸಳೆಯನ್ನು ಸೆರೆಹಿಡಿದು ಕೊಂಡೊಯ್ದಿದ್ದಾರೆ. ಇದರಿಂದ ಸ್ಥಳೀಯ ರೈತರು ನಿಟ್ಟುಸಿರು ಬಿಟ್ಟಿದ್ದಾರೆ.

ಕೃಷ್ಣಾ ನದಿ ತೀರದ ಜಮೀನುಗಳಲ್ಲಿ ಕೃಷಿ ಚಟುವಟಿಕೆ ನಡೆಸುತ್ತಿರುವ ರೈತರಿಗೆ ಮೊಸಳೆಗಳ ಹಾವಳಿ ಆತಂಕ ಮೂಡಿಸಿದೆ. ನದಿಯಿಂದ ಮೊಸಳೆಗಳು ಕೃಷಿ ಜಮೀನುಗಳಿಗೆ ಪ್ರವೇಶಿಸುವ ಸಾಧ್ಯತೆ ಇರುವುದರಿಂದ ರೈತರು ಎಚ್ಚರಿಕೆಯಿಂದ ಕೆಲಸ ಮಾಡಬೇಕಾದ ಪರಿಸ್ಥಿತಿ ಎದುರಾಗಿದೆ.

ಮೊಸಳೆ ಗದ್ದೆಗೆ ನುಗ್ಗಿದ್ದರಿಂದ ಭತ್ತದ ಬೆಳೆ ಹಾನಿಗೊಳಗಾಗಿ ರೈತರಿಗೆ ಆರ್ಥಿಕ ನಷ್ಟ ಉಂಟಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಹಾನಿಗೊಳಗಾದ ಜಮೀನಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಸಂತ್ರಸ್ತ ರೈತರಿಗೆ ಸೂಕ್ತ ಪರಿಹಾರ ಒದಗಿಸಬೇಕು ಎಂಬ ನಿರೀಕ್ಷೆಯನ್ನು ಸ್ಥಳೀಯ ರೈತರು ವ್ಯಕ್ತಪಡಿಸಿದ್ದಾರೆ.

## ಶಿಕ್ಷಕರ ಸಮಸ್ಯೆಗಳ ಪರಿಹಾರಕ್ಕೆ ಶರಣಪ್ಪ ಮಟ್ಟೂರು ಬೆಂಬಲಿಸಿ: ಎ. ವಸಂತಕುಮಾರ ಮನವಿ



ರಾಯಚೂರು: ಈಶಾನ್ಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆ ಹಿನ್ನೆಲೆಯಲ್ಲಿ ನಗರದ ವಿವಿಧ ಶಾಲೆಗಳಿಗೆ ಭೇಟಿ ನೀಡಿದ ಕೆಪಿಸಿಸಿ ಕಾರ್ಯಾಧ್ಯಕ್ಷ, ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ಉಸ್ತುವಾರಿ ಹಾಗೂ ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ ಅವರು ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಪರ ಮತಯಾಚನೆ ನಡೆಸಿದರು.

ಶಾಲೆಗಳ ಶಿಕ್ಷಕರು ಹಾಗೂ ಶಿಕ್ಷಣ ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಸಮಾಲೋಚನೆ ನಡೆಸಿದ ಅವರು, ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಅವರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ವಸಂತಕುಮಾರ, ಶರಣಪ್ಪ ಮಟ್ಟೂರು ಅವರು ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸುವುದರ ಜೊತೆಗೆ ಅವರ ಹಕ್ಕುಗಳ ರಕ್ಷಣೆಗಾಗಿ ನಿರಂತರವಾಗಿ ಪ್ರಯತ್ನಿಸುತ್ತಿದ್ದಾರೆ. ಶಿಕ್ಷಕರು ಹಾಗೂ ಶಿಕ್ಷಣ ಸಂಸ್ಥೆಗಳು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಅವರಿಗೆ ಸಮಗ್ರ ಅರಿವಿದ್ದು, ಆಯ್ಕೆಯಾದಲ್ಲಿ ಹಂತ ಹಂತವಾಗಿ ಸಮಸ್ಯೆಗಳ ಪರಿಹಾರಕ್ಕೆ ಶ್ರಮಿಸಲಿದ್ದಾರೆ ಎಂದು ಹೇಳಿದರು.

ರಾಜ್ಯ ಕಾಂಗ್ರೆಸ್ ಸರ್ಕಾರವು ಕಲ್ಯಾಣ ಕರ್ನಾಟಕ ಭಾಗದ ಶಿಕ್ಷಣ ಸಂಸ್ಥೆಗಳ ಅಭಿವೃದ್ಧಿ ಹಾಗೂ ಶಿಕ್ಷಕರ ಸಮಸ್ಯೆಗಳ ಪರಿಹಾರಕ್ಕೆ ಆದ್ಯತೆ ನೀಡುತ್ತಿದೆ. ಈ ಭಾಗದಲ್ಲಿ ಖಾಲಿ ಇರುವ ಸುಮಾರು 7 ಸಾವಿರ ಶಿಕ್ಷಕರ ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ. ಅಲ್ಲದೆ, ಸಂವಿಧಾನದ 371(ಜೆ) ವಿಧಿಯಡಿ ಕಲ್ಯಾಣ ಕರ್ನಾಟಕ ಭಾಗದ ವಿವಿಧ 2ನೇ ಪುಟಕ್ಕೆ

## ಮಠ-ಮಾನ್ಯಗಳಿಂದ ಸಮಾಜದಲ್ಲಿ ಶಾಂತಿ, ಸೌಹಾರ್ದತೆ ವೃದ್ಧಿ: ಎನ್.ಎಸ್. ಬೋಸರಾಜು



ರಾಯಚೂರು: ಮಠ-ಮಾನ್ಯಗಳು ಜನರಲ್ಲಿ ಆಧ್ಯಾತ್ಮಿಕ ಚಿಂತನೆ ಬೆಳೆಸುವುದರ ಜೊತೆಗೆ ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಹಾಗೂ ಮಾನವೀಯ ಮೌಲ್ಯಗಳನ್ನು ಉಳಿಸಿ ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿವೆ ಎಂದು ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಹೇಳಿದರು.

ದಸರಾ ಹಬ್ಬದ ಅಂಗವಾಗಿ ಸೋಮವಾರ ನಗರದ ಪೇಟೆ ಹಿರೇಮಠ ಹಾಗೂ ಕಿಲ್ಲೆ ಶ್ರೀ ಬೃಹನ್ಮಠಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದ ಅವರು, ಉಭಯ ಮಠಗಳ ಶ್ರೀಗಳ ಆಶೀರ್ವಾದ ಪಡೆದು ಮಾತನಾಡಿದರು.

ಹಬ್ಬ-ಹರಿದಿನಗಳು ಕೇವಲ ಧಾರ್ಮಿಕ ಆಚರಣೆಗಳಿಗೆ ಸೀಮಿತವಾಗದೆ, ಸಮಾಜದ ಎಲ್ಲ ವರ್ಗದ ಜನರನ್ನು ಒಗ್ಗೂಡಿಸುವ ಮಹತ್ವದ ಸಂದರ್ಭಗಳಾಗಿವೆ. ಇಂತಹ ಆಚರಣೆಗಳು ಜನರಲ್ಲಿ ಪರಸ್ಪರ ಪ್ರೀತಿ, ವಿಶ್ವಾಸ, ಸಹಬಾಳ್ವೆ ಹಾಗೂ ಸಹೋದರತ್ವದ ಭಾವನೆಯನ್ನು ಬೆಳೆಸುತ್ತವೆ. ನಮ್ಮ ನಾಡಿನ ಮಠಗಳು ಧಾರ್ಮಿಕ ಕಾರ್ಯಗಳೊಂದಿಗೆ ಸಾಮಾಜಿಕ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ಜನರಿಗೆ ಮಾರ್ಗದರ್ಶನ ನೀಡುತ್ತಿವೆ ಎಂದು ತಿಳಿಸಿದರು.

ದಸರಾ ಹಬ್ಬವು ದುಷ್ಟಶಕ್ತಿಗಳ ವಿರುದ್ಧ ಸತ್ಯ ಮತ್ತು ಧರ್ಮದ ವಿಜಯವನ್ನು ಸಾರುವ ಪವಿತ್ರ ಹಬ್ಬವಾಗಿದೆ. ನಾಡಿನ ಜನತೆ ಸುಖ, ಶಾಂತಿ ಮತ್ತು ನೆಮ್ಮದಿಯಿಂದ ಬದುಕುವಂತಾಗಬೇಕು. ರೈತರಿಗೆ ಉತ್ತಮ ಮಳೆ, ಬೆಳೆ ದೊರೆತು ನಾಡಿನಲ್ಲಿ ಸಮೃದ್ಧಿ ನೆಲೆಸಲಿ ಎಂದು ದೇವರಲ್ಲಿ ಪ್ರಾರ್ಥಿಸಿರುವುದಾಗಿ ಹೇಳಿದರು.

ಪೇಟೆ ಹಿರೇಮಠದ 2ನೇ ಪುಟಕ್ಕೆ

# ಮತದಾರರು ನಿಗದಿತ ಸಮಯದಲ್ಲಿ ಮತಗಟ್ಟೆಗೆ ಆಗಮಿಸಿ, ತಮ್ಮ ಹಕ್ಕನ್ನು ಚಲಾಯಿಸಿ: ಸಹಾಯಕ ಚುನಾವಣಾಧಿಕಾರಿ ಪೂವಿತಾ ಎಸ್.



ರಾಯಚೂರು ಅ. 22 (ಕರ್ನಾಟಕ ವಾರ್ತೆ): ವಿಧಾನ ಪರಿಷತ್ತಿಗೆ ಈಶಾನ್ಯ ಶಿಕ್ಷಕರ ಕ್ಷೇತ್ರದಿಂದ ಆಯ್ಕೆಗೆ ಅಕ್ಟೋಬರ್ 23ರಂದು ಬೆಳಿಗ್ಗೆ 8 ಗಂಟೆಯಿದ ಸಂಜೆ 4ಗಂಟೆವರೆಗೆ ಕ್ಷೇತ್ರದಾದ್ಯಂತ ಮತದಾನ ನಡೆಯಲಿದ್ದು, ಮತದಾರರು ನಿಗದಿತ ಸಮಯದಲ್ಲಿ ಮತಗಟ್ಟೆಗೆ ಆಗಮಿಸಿ, ಚುನಾವಣಾ ಆಯೋಗದ ಸೂಚನೆಗಳನ್ನು ಪಾಲಿಸುವ ಮೂಲಕ ತಮ್ಮ ಪ್ರಜಾಸತ್ತಾತ್ಮಕ ಹಕ್ಕನ್ನು ಚಲಾಯಿಸಬೇಕೆಂದು ಕರ್ನಾಟಕ ಈಶಾನ್ಯ ಶಿಕ್ಷಕರ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ತಿಳಿಸಿದ್ದಾರೆ.

ಭಾರತ ಚುನಾವಣಾ ಆಯೋಗವು ದಿನಾಂಕ:22-09-2026 ರಂದು ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ-2026ರ ದ್ವೈಯವಾರ್ಷಿಕ ಚುನಾವಣೆಯನ್ನು ಘೋಷಣೆ ಮಾಡಿದ್ದು, ಚುನಾವಣೆಯ ಚುನಾವಣಾ ಮಾದರಿ ನೀತಿ ಸಂಹಿತೆಯು ಕ್ಷೇತ್ರಾದ್ಯಾಂತ ಜಾರಿಯಲ್ಲಿರುತ್ತದೆ. ಕಲಬುರಗಿ ವಿಭಾಗದ ರಾಯಚೂರು ಜಿಲ್ಲೆಯು ಕರ್ನಾಟಕ ಈಶಾನ್ಯ ಶಿಕ್ಷಕರ ಮತಕ್ಷೇತ್ರದ ವ್ಯಾಪ್ತಿಗೆ ಒಳಪಟ್ಟಿರುವುದರಿಂದ ಈ ಚುನಾವಣೆಗೆ ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ ಕಲಬುರಗಿ ರವರು ಚುನಾವಣಾಧಿಕಾರಿ ಅಲ್ಲದೇ ಮತದಾರರ ನೋಂದಣಾಧಿಕಾರಿಗಳಾಗಿರುತ್ತಾರೆ, ಜಿಲ್ಲಾಧಿಕಾರಿ ರಾಯಚೂರು ಇವರು ಸಹಾಯಕ ಚುನಾವಣಾಧಿಕಾರಿಗಳಾಗಿ ಕಾರ್ಯನಿರ್ವಹಿಸುತ್ತಾರೆ.

ಅರ್ಹ ಮತದಾರರಿಗೆ ಸಹಾಯಕ್ಕಾಗಿ, ಸಹಾಯವಾಣಿ ಕೇಂದ್ರವನ್ನು ರಾಯಚೂರು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಈಗಾಗಲೇ ಸ್ಥಾಪಿಸಲಾಗಿದ್ದು, ಸಹಾಯವಾಣಿ ಕೇಂದ್ರದ ಸಂಖ್ಯೆ 08532-228551 ಇರುತ್ತದೆ. ಅರ್ಹ ಮತದಾರರು ಈ ಸಹಾಯವಾಣಿ ಕೇಂದ್ರದ ಸದುಪಯೋಗವನ್ನು ಪಡೆದುಕೊಳ್ಳಬಹುದಾಗಿದೆ.

ಚುನಾವಣೆಯ ಮತಗಟ್ಟೆ ಸಿಬ್ಬಂದಿಗಳ ನೇಮಕಾತಿ, (Appointment of Polling party) ಹಾಗೂ ಮೈಕ್ರೋ ಅಬ್ಜರವರ್ (Appointment of Micro observer) ಪ್ರಕ್ರಿಯೆಯನ್ನು ನಿಯಮಾನುಸಾರ ನೇಮಿಸಿ ದಿನಾಂಕ:12.10.2026ರದು ಮೊದಲನೇ ಸುತ್ತಿನ ಹಾಗೂ 17.10.2026ರಂದು ಎರಡನೇ ಸುತ್ತಿನ ತರಬೇತಿಯನ್ನು ಜಿಲ್ಲಾ ಮಟ್ಟದಲ್ಲಿ ಆಯೋಜಿಸಿ ಎಲ್ಲಾ ಅಧಿಕಾರಿ/ಸಿಬ್ಬಂದಿಗಳಿಗೆ ತರಬೇತಿಯನ್ನು ನೀಡಲಾಗಿದೆ. ಸದರಿ ಚುನಾವಣೆಯ ಮತದಾನವು ದಿನಾಂಕ23-10-2026 ರಂದು ಬೆಳಿಗ್ಗೆ 8 ಗಂಟೆಯಿದ ಸಾಯಂಕಾಲ 4ಗಂಟೆಯ ವರೆಗೆ ಅರ್ಹ ಮತದಾರರಿಂದ ಮತದಾನ ನಡೆಯಲಿದೆ.

ಮತದಾನ ಕೇಂದ್ರಗಳು: ರಾಯಚೂರಿನ ಎಪಿಎಮ್‌ಸಿ ಕಟ್ಟಡ, ಶ್ರೀಶಾರದ ಶಾಲೆ, ಬಾಲಕಿಯರ ಸರ್ಕಾರಿ ಪಿಯು ಕಾಲೇಜು, ತಾಲೂಕು ಪಂಚಾಯತ್ ಕಟ್ಟಡ, ಜಿಹೆಚ್‌ಪಿಎಸ್ ಯರಮರಸ್ ಕ್ಯಾಂಪ್, ಮಾನವಿಯ ಟಿಎಮ್‌ಸಿ ಕಚೇರಿ, ಸಿರವಾರದ ಸರ್ಕಾರಿ ಪಿಯು ಕಾಲೇಜ್, ದೇವದುರ್ಗದ ತಹಶೀಲ್ದಾರ್ ಕಚೇರಿ, ಗಬ್ಬೂರು ಗ್ರಾಮ ಪಂಚಾಯತ್, ಜಾಲಹಳ್ಳಿ ಗ್ರಾಮ ಪಂಚಾಯತ್, ಅರಕೇರಾ ಗ್ರಾಮ ಪಂಚಾಯತ್, ಲಿಂಗಸುಗೂರಿನ ತಹಶೀಲ್ದಾರ್ ಕಚೇರಿ ಹಾಗೂ ಹಟ್ಟಿ ಜೂನಿಯರ್ ಕಾಲೇಜ್, ಸಿಂಧನೂರಿನ ತಹಶೀಲ್ದಾರ್ ಕಚೇರಿ, ಮಸ್ಕಿಯ ಮುನ್ಸಿಪಾಲ್ ಕಚೇರಿ ಸೇರಿದಂತೆ ರಾಯಚೂರು ಜಿಲ್ಲೆಯ ಒಟ್ಟು 16 ಮತಗಟ್ಟೆಗಳಲ್ಲಿ ಒಟ್ಟು 5402 ಮತದಾರರ ಪೈಕಿ 3178 ಪುರಷರು ಹಾಗೂ 2224 ಸ್ತಿಯರು ಮತ ಚಲಾವಣೆ ಮಾಡಲಿದ್ದಾರೆ.

ಈ ಮೇಲಿನಂತೆ ಅರ್ಹ ಮತದಾರರು ಸ್ಪರ್ಧಿಸುವ ಅಭ್ಯರ್ಥಿಗಳಿಗೆ ಅನುಕ್ರಮವಾಗಿ ಆಯೋಗದಿಂದ ನೀಡಲಾಗಿರುವ ನೇರಳ ಬಣ್ಣದ (Violet sketch pen) ಪೆನ್ನಿನ ಮುಖಾಂತರ ಮಾತ್ರ ಪ್ರಾಶಸ್ತ ಮತವನ್ನು ಚಲಾಯಿಸತಕ್ಕದ್ದು. ಕ್ರಮ ಸಂಖ್ಯೆ ಕೈ ಬಿಟ್ಟು ಮತ ಚಲಾಯಿಸಲಾದ ನಂತರದ ಮತಗಳು ಅಮಾನ್ಯಗೊಳ್ಳಲಿವೆ. ಹಾಗೂ ಬೇರೆ ಇತರೆ ಬಣ್ಣದ ಪೆನ್ನಿನಿಂದ ಮತ ಚಲಾಯಿಸದಲ್ಲಿ ಹಾಗೂ ಗುರುತುಗಳನ್ನೊಳಗೊಂಡ ಚಲಾಯಿಸಲಾದ ಮತಗಳು ಸಹ ಅಮಾನ್ಯಗೊಳ್ಳಲಿವೆ.

ದಾಖಲಾತಿಗಳು: ಆಧಾರ್ ಕಾರ್ಡ್, ಚಾಲನಾ ಪರವಾನಗಿ, ಪ್ಯಾನ್ ಕಾರ್ಡ್,ಭಾರತೀಯ ಪಾಸ್ ಪೋರ್ಟ್,

ರಾಜ್ಯ/ಕೇಂದ್ರ ಸರ್ಕಾರ, ಸಾರ್ವಜನಿಕ ವಲಯದ ಉದ್ಯಮಗಳು, ಸ್ಥಳೀಯ ಸಂಸ್ಥೆಗಳು ಅಥವಾ ಇತರ ಖಾಸಗಿ ಕೈಗಾರಿಕಾ ಸಂಸ್ಥೆಗಳು ತಮ್ಮ ಉದ್ಯೋಗಿಗಳಿಗೆ ನೀಡಿರುವ ಸೇವಾ ಗುರುತಿನ ಚೀಟಿ, ಸಂಸದರು /ಶಾಸಕರು /ವಿಧಾನ ಪರಿಷತ್ ಸದಸ್ಯರಿಗೆ ನೀಡಲಾದ ಅಧಿಕೃತ ಗುರುತಿನ ಚೀಟಿಗಳು, ಶಿಕ್ಷಕರ/ಪದವೀಧರರ ಕ್ಷೇತ್ರಕ್ಕೆ ಸಂಬಧಿಸಿದ ಮತದಾರರು ಉದ್ಯೋಗಿಗಳಾಗಿರುವ ಶಿಕ್ಷಣ ಸಂಸ್ಥೆಗಳು ನೀಡಿರುವ ಸೇವಾ ಗುರುತಿನ ಚೀಟಿ, ವಿಶ್ವವಿದ್ಯಾನಿಲಯವು ನೀಡಿರುವ ಪದವಿ/ಡಿಪ್ಲೊಮಾ ಪ್ರಮಾಣಪತ್ರ (ಮೂಲ ಪ್ರತಿ), ಸಕ್ಷಮ ಪ್ರಾಧಿಕಾರವು ನೀಡಿರುವ ದೈಹಿಕ ಅಂಗವೈಕಲ್ಯ ಪ್ರಮಾಣಪತ್ರ (ಮೂಲ ಪ್ರತಿ), ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯವು ನೀಡುವ ವಿಶಿಷ್ಟ ಅಂಗವೈಕಲ್ಯ ಗುರುತಿನ ಚೀಟಿಗಳಲ್ಲಿ ಯಾವುದಾದರೊಂದು ಗುರುತಿನ ಚೀಟಿಯನ್ನು ತೋರಿಸಿ ಮತ ಚಲಾಯಿಸಬಹುದಾಗಿದೆ.

ಚುನಾವಣೆಯ ಮಸ್ಟರಿಂಗ್ ಮತ್ತು ಡಿ-ಮಸ್ಟರಿಂಗ್ ಕಾರ್ಯಗಳ ಸಂದರ್ಭದಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ. ದಿನಾಂಕ: 23-10-2026ರಂದು ನಡೆಯುವ ಮತದಾನಕ್ಕೆಸಂಬಧಿಸಿದತೆ ಪ್ರತಿ ಮತಗಟ್ಟೆಯಲ್ಲಿಯೂ ಭದ್ರತೆಗಾಗಿ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಮತಪೆಟ್ಟಿಗೆಗಳ ಸಾಗಣೆಗೂ ಅಗತ್ಯ ಪೊಲೀಸ್ ಭದ್ರತೆಯನ್ನು ಒದಗಿಸಲಾಗಿದೆ.

ಮತದಾನ ಕೇಂದ್ರಗಳ ಸುತ್ತಮುತ್ತ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಅಲ್ಲದೆ ನಿಯಮಾನುಸಾರ ದಿನಾಂಕ: 21-10-2026 ರಂದು ಸಂಜೆ 4 ಗಂಟೆಯಿದ ದಿನಾಂಕ: 23-10-2026 ರಂದು ಸಂಜೆ 6 ಗಂಟೆಯವರೆಗೆ ಮದ್ಯ ಮಾರಾಟ ಮತ್ತು ಮದ್ಯಪಾನ ನಿಷೇಧಿಸಿ ಆದೇಶ ಹೊರಡಿಸಲಾಗಿದೆ.

ದಿನಾಂಕ:23-10-2026ರ'ದ'ು ನಡೆಯುವ ಮತದಾನಕ್ಕೆ ಸಂಬಧಿಸಿದತೆ ದಿನಾಂಕ:22-10-2026ರದು ಆಯಾ ತಾಲ್ಲೂಕಿನ ತಹಶೀಲ್ದಾರರ ಕಚೇರಿಯಲ್ಲಿ ಮಸ್ಟರಿಂಗ್ ಕೈಗೊಳ್ಳಲು ವ್ಯವಸ್ಥೆ ಮಾಡಲಾಗಿದೆ. ಹಾಗೂ ಡಿ-ಮಸ್ಮರಿಂಗ್ ಕಾರ್ಯವನ್ನು ಜಿಲ್ಲಾಧಿಕಾರಿಗಳ ಕಾರ್ಯಾಲಯ ರಾಯಚೂರಿನಲ್ಲಿ ಕೈಗೊಳ್ಳಲು ವ್ಯವಸ್ಥೆ ಮಾಡಲಾಗಿದೆ. ಚುನಾವಣೆಯ ಮತ ಎಣಿಕೆಯು ಅಕ್ಟೋಬರ್ 27ರ ಬೆಳಿಗ್ಗೆ 8ಗಂಟೆಯಿದ ಕಲಬುರಗಿ ವಿಶ್ವವಿದ್ಯಾಲಯದ ಗಣಿತ ವಿಭಾಗದ ಕಟ್ಟಡದಲ್ಲಿರುವ ಭಾಸ್ಕರ ಸಭಾಂಗಣದಲ್ಲಿ ನಡೆಯಲಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾನಸಿಕ ಆರೋಗ್ಯ ಸೇವೆ ಪಡೆಯಲು ಹಿಂದೇಟು ಹಾಕಬಾರದು: ಡಾ.ನಂದಿತಾ



ರಾಯಚೂರು ಅ. 22 (ಕರ್ನಾಟಕ ವಾರ್ತೆ): ವ್ಯಕ್ತಿಯಲ್ಲಿ ಪದೇ ಪದೇ ಎದುರಾಗುವ ತೀವ್ರ ಸಂಕಷ್ಟಗಳು, ಅತಿಯಾದ ಮಾನಸಿಕ ಒತ್ತಡ ಹಾಗೂ ಮಿತಿಮೀರಿದ ಆಲೋಚನೆಗಳಿಂದ ಮಾನಸಿಕ ಕಾಯಿಲೆಗಳು ಕಾಣಿಸಿಕೊಳ್ಳುವ ಸಾಧ್ಯತೆ ಇರುತ್ತದೆ. ಆರಂಭಿಕ ಹಂತದಲ್ಲಿಯೇ ರೋಗಿಯ ಮನಃಸ್ಥಿತಿಯನ್ನು ಅರ್ಥೈಸಿಕೊಂಡು, ಕುಟುಂಬದ ಸದಸ್ಯರ ಸಹಕಾರ ಮತ್ತು ಪ್ರೀತಿಯೊಂದಿಗೆ ಸೂಕ್ತ ಚಿಕಿತ್ಸೆ ಕೊಡಿಸಿದರೆ ಕಾಯಿಲೆಯನ್ನು ಬೇಗನೆ ಗುಣಪಡಿಸಬಹುದು ಈ ದಿಸೆಯಲ್ಲಿ ಸೇವೆ ಪಡೆಯಲು ಯಾರು ಹಿಂದೇಟು ಹಾಕಬಾರದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ನಂದಿತಾ ಎಮ್. ಎನ್. ಅವರು ಹೇಳಿದರು.

ಅಕ್ಟೋಬರ್ 22ರ ಸೋಮವಾರ ದಂದು ರಾಯಚೂರಿನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಪೊಲೀಸ್ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಸಂಯುಕ್ತಾಶ್ರಯದಲ್ಲಿ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ-2026ರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸಾಮಾನ್ಯವಾಗಿ ಮಾನಸಿಕ ರೋಗಿಗಳನ್ನು ಮನೆಯಲ್ಲಿ ಇರಿಸಿಕೊಳ್ಳುವುದು ಅಪಾಯಕಾರಿ ಎಂಬ ತಪ್ಪು ಕಲ್ಪನೆ ಇತ್ತು. ಆದರೆ ಕಳೆದ ಮೂರು ದಶಕಗಳಲ್ಲಿ ವೈದ್ಯಕೀಯ ಕ್ಷೇತ್ರದಲ್ಲಿ ಆದ ಅಭೂತಪೂರ್ವ ಸಂಶೋಧನೆಗಳು ಮತ್ತು ಸುಧಾರಿತ ಚಿಕಿತ್ಸಾ ಪದ್ಧತಿಗಳಿಂದಾಗಿ ರೋಗಿಗಳಿಗೆ ಮನೆಯಲ್ಲಿಯೇ ಆರೈಕೆ ಹಾಗೂ ಚಿಕಿತ್ಸೆ ನೀಡಲು ಸಾಧ್ಯವಿದೆ. ಪ್ರತಿಯೊಬ್ಬರಿಗೂ ಸೂಕ್ತ ಚಿಕಿತ್ಸೆ ಲಭ್ಯವಿದ್ದು, ಸಕಾರಾತ್ಮಕ ಚಿಂತನೆಗಳನ್ನು ಬೆಳೆಸಿಕೊಳ್ಳುವ ಮೂಲಕ ಇಂತಹ ಸಮಸ್ಯೆಗಳಿಂದ ಹೊರಬರಬಹುದು ಎಂದರು.

ಜಿಲ್ಲಾ ಮಾನಸಿಕ ಕಾರ್ಯಕ್ರಮ ಅಧಿಕಾರಿ ಡಾ.ಶಿವಕುಮಾರ ನಾರಾ ಅವರು ಮಾತನಾಡಿ, ವಿವಿಧ ವೃತ್ತಿಯಲ್ಲಿ ಕರ್ತವ್ಯ ನಿರ್ವಹಿಸುವ ಪ್ರತಿಯೊಬ್ಬರೂ ಕರ್ತವ್ಯ ನಿರ್ವಹಣೆಗಾಗಿ ಅನಗತ್ಯ ಒತ್ತಡ ಹಾಗೂ ಖಿನ್ನತೆಗೆ ಒಳಗಾಗಬಾರದು. ಯಾವುದೇ ಮಾನಸಿಕ ಸಮಸ್ಯೆ ಅಥವಾ ಸಂಕಷ್ಟಗಳಿದ್ದಾಗ ಮುಕ್ತವಾಗಿ ಸಹೋದ್ಯೋಗಿಗಳೊಂದಿಗೆ ಮನದಾಳದಲ್ಲಿಯ ಮಾತುಗಳನ್ನು ಹಂಚಿಕೊಡು ಮಾನಸಿಕವಾಗಿ ಸದೃಢರಾಗಬೇಕು ಎಂದರು.

ಮನೋರೋಗ ತಜ್ಞ ಡಾ ಮನೋಹರ ಪತ್ತಾರ, ಈ ವರ್ಷದ ಘೋಷ ವಾಕ್ಯವಾದ ಅನುಭವದ ಧ್ವನಿ ಬದಲಾವಣೆಯ ಶಕ್ತಿ ಎಂಬ ಹಿನ್ನಲೆಯಡಿ ಮಾತನಾಡುತ್ತಾ, ಸಾಮಾನ್ಯವಾಗಿ 15 ರಿಂದ 25 ವರ್ಷದ ಯುವ ಜನತೆಯಲ್ಲಿ ಗ್ರಾಮೀಣ-ನಗರ ಅಥವಾ ಬಡವ-ಶ್ರೀಮಂತ ಎಂಬ ಭೇದವಿಲ್ಲದೆ ಮಾನಸಿಕ ಸಮಸ್ಯೆಗಳು ಕಾಣಿಸಿಕೊಳ್ಳಬಹುದು. ಸರ್ಕಾರಿ ಆಸ್ಪತ್ರೆಗಳಲ್ಲಿ ಇದಕ್ಕಾಗಿ ಉಚಿತ ಆಪ್ತ ಸಮಾಲೋಚನೆ ಮತ್ತು ಔಷಧೋಪಚಾರಗಳು ಲಭ್ಯವಿವೆ ಎಂದರು.

ಸಾರ್ವಜನಿಕರು ಯಾವುದೇ ಸಂದರ್ಭದಲ್ಲೂ ದಿನದ 24 ಗಂಟೆಯೂ ಕಾರ್ಯನಿರ್ವಹಿಸುವ ಟೆಲಿ-ಮನಸ್ ಉಚಿತ ಸಹಾಯವಾಣಿ 14416 ಸಂಖ್ಯೆಗೆ ಕರೆ ಮಾಡಿ ಸೂಕ್ತ ಮಾಹಿತಿ ಹಾಗೂ ಮಾರ್ಗದರ್ಶನ ಪಡೆಯಬಹುದು ಎಂದು ತಿಳಿಸಿದರು. ಅಲ್ಲದೆ ಮಾನಸಿಕ ಸಮಸ್ಯೆಯು ವ್ಯಕ್ತಿಯ ಆಲೋಚನೆ, ಭಾವನೆ ಹಾಗೂ ಗ್ರಹಿಕೆಯನ್ನು ಬಾಧಿಸುತ್ತದೆ. ಕಾರಣವಿಲ್ಲದೆ ಅತಿಯಾದ ಕೋಪ, ದುಃಖ, ಅತಿಯಾದ ನಗು ಅಥವಾ ಅಳು ಮುಂತಾದ ಲಕ್ಷಣಗಳು ಕಂಡುಬರುತ್ತವೆ. ಲಕ್ಷಣಗಳು ಕಂಡ ಕೆಲವೇ ವಾರಗಳಲ್ಲಿ ಮಾತ್ರೆ ಅಥವಾ ಚುಚ್ಚುಮದ್ದಿನ ಚಿಕಿತ್ಸೆ ಆರಂಭಿಸಿದರೆ ಕಾಯಿಲೆಯನ್ನು ಶೀಘ್ರವೇ ನಿಯಂತ್ರಿಸಬಹುದು. ಪ್ರಸ್ತುತ ಮನೋಚೈತನ್ಯ ಕಾರ್ಯಕ್ರಮದಡಿ ಪ್ರತಿ ಮಂಗಳವಾರ ಜಿಲ್ಲೆಯ ಎಲ್ಲಾ ತಾಲೂಕು ಕೇಂದ್ರಗಳಲ್ಲಿ ಉಚಿತ ತಪಾಸಣೆ ಮತ್ತು ಆಪ್ತ ಸಮಾಲೋಚನೆ ನಡೆಸಲಾಗುತ್ತಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಈ ವೇಳೆ ಮಾನಸಿಕ ಆರೋಗ್ಯ ರಕ್ಷಣೆಯ ಕುರಿತು ಪ್ರತಿಜ್ಞಾವಿಧಿ ಬೋಧಿಸಿ ಬಿತ್ತಿ ಪತ್ರ ಬಿಡುಗಡೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಪೊಲೀಸ್ ಇನ್ಸ್ಪೆಕ್ಟರ್ ಅಮರೇಶ್, ಪೊಲೀಸ್ ಸಬ್ ಇನ್ಸ್ಪೆಕ್ಟರ್ ಸುನೀಲ್ ಹೆಚ್, ಜಿಲ್ಲಾ ಮಾನಸಿಕ ಆರೋಗ್ಯ ವಿಭಾಗದ ಸೈಕಾಲಜಿಸ್ಟ್ ಅರುಣ್ ಕುಮ್ಾರ್, ಪಿಎಸ್‌ಡಬ್ಲ್ಯು ದೀಪಾ ಎಸ್ ಎಲ್, ಪಿಎಸ್‌ಎನ್ ಗಂಗಮ್ಮ, ಪಿಎಸ್‌ಡಬ್ಲ್ಯು ಮಂಜುಳಾ ಸೇರಿದಂತೆ ಪೊಲಿಸ್ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಯರು ಇದ್ದರು.

# ಮೊದಲನೇ ಪುಟದಿಂದ

## ಥಾರ್-ಎಕ್ಸ್‌ಯುವಿ ಕಾರುಗಳ ಮುಖಾಮುಖಿ ಡಿಕ್ಕಿ: ಶಾಸಕರ ಸಂಬಂಧಿ ಸೇರಿ ಹಲವರಿಗೆ ಗಾಯ

ಎಂಬ ಮಾಹಿತಿ ಲಭ್ಯವಾಗಿದೆ.

ವಿಷಯ ತಿಳಿಯುತ್ತಿದ್ದಂತೆ ಲಿಂಗಸುಗೂರು ಪೊಲೀಸರು ಘಟನಾ ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿದ್ದಾರೆ. ಈ ಕುರಿತು ಲಿಂಗಸುಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ವಾಹನಗಳ ಮುಖಾಮುಖಿ ಡಿಕ್ಕಿಗೆ ಕಾರಣವಾದ ಅಂಶಗಳ ಕುರಿತು ಪೊಲೀಸರು ತನಿಖೆ ಕೈಗೊಂಡಿದ್ದಾರೆ.

## ಈಶಾನ್ಯ ಶಿಕ್ಷಕರ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವು ನಿಶ್ಚಿತ, ಬಿಜೆಪಿಗೆ ಸೋಲು ಖಚಿತ: ಎ. ವಸಂತಕುಮಾರ

ರಾಜ್ಯ ಸರ್ಕಾರ ಸಕಾರಾತ್ಮಕ ನಿಲುವು ಹೊಂದಿದೆ. ಮುಖ್ಯಮಂತ್ರಿ ಅವರು ಈ ಕುರಿತು ಈಗಾಗಲೇ ಭರವಸೆ ನೀಡಿದ್ದು, ಸೂಕ್ತ ಸಮಿತಿ ಮೂಲಕ ಪರಿಶೀಲಿಸಿ ಮುಂದಿನ ದಿನಗಳಲ್ಲಿ ಕ್ರಮ ಕೈಗೊಳ್ಳಲಾಗುವುದು. ಶಿಕ್ಷಕರ ಬಡ್ತಿ, ವೇತನ ಹೆಚ್ಚಳ ಹಾಗೂ ಇತರೆ ಸೇವಾ ಸೌಲಭ್ಯಗಳಿಗೆ ಸಂಬಂಧಿಸಿದ ಸಮಸ್ಯೆಗಳ ಪರಿಹಾರಕ್ಕೂ ಸರ್ಕಾರ ಆದ್ಯತೆ ನೀಡಲಿದೆ ಎಂದು ತಿಳಿಸಿದರು.

ಬಿಜೆಪಿ ನಾಯಕರು ಈ ಚುನಾವಣೆಯಲ್ಲಿಯೂ ಗೆಲ್ಲುವ ವಿಶ್ವಾಸ ವ್ಯಕ್ತಪಡಿಸುತ್ತಿದ್ದಾರೆ. ಆದರೆ ಶಿಕ್ಷಕರ ಒಲವು ಕಾಂಗ್ರೆಸ್ ಪರವಾಗಿದ್ದು, ಈ ಬಾರಿ ಬಿಜೆಪಿಯ ಲೆಕ್ಕಾಚಾರಗಳು ಫಲಿಸುವುದಿಲ್ಲ. ಶಿಕ್ಷಕರ ಹಿತಾಸಕ್ತಿಗಿಂತ ಜಾತಿ ಮತ್ತು ಧರ್ಮದ ಆಧಾರದಲ್ಲಿ ಮತದಾರರನ್ನು ಸೆಳೆಯಲು ಬಿಜೆಪಿ ಪ್ರಯತ್ನಿಸುತ್ತಿದೆ ಎಂದು ಟೀಕಿಸಿದರು.

ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ ಅವರು, ಈ ಹಿಂದೆ ಜಾತಿ ಮತ್ತು ಧರ್ಮದ ಹೆಸರಿನಲ್ಲಿ ಮತಗಳನ್ನು ಸೆಳೆಯಲಾಗಿದೆ. ನಂತರ ವಿದ್ಯುನ್ಮಾನ ಮತಯಂತ್ರಗಳ ದುರ್ಬಳಕೆ ಹಾಗೂ ಮತಗಳ್ಳತನದ ಮೂಲಕ ಚುನಾವಣೆಗಳಲ್ಲಿ ಗೆಲುವು ಸಾಧಿಸಲಾಗಿದೆ ಎಂದು ಆರೋಪಿಸಿದರು. ಇದೀಗ ಮತ್ತೆ ಅದೇ ತಂತ್ರಗಳನ್ನು ಬಳಸಲು ಬಿಜೆಪಿ ಮತ್ತು ಆರ್‌ಎಸ್‌ಎಸ್ ಪ್ರಯತ್ನಿಸುತ್ತಿವೆ. ಚುನಾವಣಾ ವ್ಯವಸ್ಥೆಯ ಕುರಿತು ಜನರಲ್ಲಿ ಅನುಮಾನಗಳು ಮೂಡುತ್ತಿದ್ದು, ಪ್ರಜಾಪ್ರಭುತ್ವದ ಮೌಲ್ಯಗಳನ್ನು ಕಾಪಾಡುವ ಅಗತ್ಯವಿದೆ ಎಂದು ಪ್ರತಿಪಾದಿಸಿದರು.

ಮತಗಳ್ಳತನದಂತಹ ಕೃತ್ಯಗಳ ಹಿಂದೆ ಆರ್‌ಎಸ್‌ಎಸ್‌ನ ತಂತ್ರಗಾರಿಕೆ ಇದೆ ಎಂದು ಆರೋಪಿಸಿದ ಅವರು, ದೇಶದಲ್ಲಿ ಯುವಜನತೆ, ವಿಶೇಷವಾಗಿ ಜೆನ್‌ಝಡ್ ಪೀಳಿಗೆಯವರು ರಾಜಕೀಯ ವ್ಯವಸ್ಥೆಯ ವಿರುದ್ಧ ಧ್ವನಿ ಎತ್ತುತ್ತಿದ್ದಾರೆ. ಇಂತಹ ಬೆಳವಣಿಗೆಗಳು ಬಿಜೆಪಿ ಮತ್ತು ಆರ್‌ಎಸ್‌ಎಸ್ ವಿರುದ್ಧ ಜನರಲ್ಲಿ ಅಸಮಾಧಾನ ಹೆಚ್ಚುತ್ತಿರುವುದನ್ನು ಸೂಚಿಸುತ್ತವೆ ಎಂದು ಅಭಿಪ್ರಾಯಪಟ್ಟರು.

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರು ಈ ಬಾರಿ ಜಾಗೃತ ನಿರ್ಧಾರ ಕೈಗೊಳ್ಳಲಿದ್ದು, ಶಿಕ್ಷಕರ ಸಮಸ್ಯೆಗಳಿಗೆ ನಿರಂತರವಾಗಿ ಸ್ಪಂದಿಸಿರುವ ಶರಣಪ್ಪ ಮಟ್ಟೂರ ಅವರನ್ನು ಗೆಲ್ಲಿಸಲಿದ್ದಾರೆ. ಕಾಂಗ್ರೆಸ್ ಪಕ್ಷವು ಶಿಕ್ಷಕರ ಹಕ್ಕುಗಳು ಹಾಗೂ ಶೈಕ್ಷಣಿಕ ಕ್ಷೇತ್ರದ ಅಭಿವೃದ್ಧಿಗೆ ಬದ್ಧವಾಗಿದೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ. ಶಾಂತಪ್ಪ, ಮಹಮ್ಮದ್ ಸಲಾಂ, ಶ್ರೀನಿವಾಸ ರೆಡ್ಡಿ, ಆಂಜನೇಯ, ಬಸವರಾಜ ಪಾಟೀಲ್ ಇಟಗಿ, ಅಮರೇಗೌಡ, ಅಬ್ದುಲ್ ಕರೀಂ, ಬಸವರಾಜ ದರೂರು, ಡಿ.ಕೆ. ಮುರಳಿ, ಡಾ. ರಝಾಕ್ ಉಸ್ತಾದ್ ಸೇರಿದಂತೆ ಪಕ್ಷದ ಹಲವು ಮುಖಂಡರು ಉಪಸ್ಥಿತರಿದ್ದರು.

## ಬಂಗಾರಪ್ಪ ಕೆರೆ ಅಭಿವೃದ್ಧಿಗೆ ₹100 ಕೋಟಿ ಯೋಜನೆ: ನೀರಿನ ಸಂಗ್ರಹ ಮಟ್ಟ ಪರಿಶೀಲಿಸಿದ ಶಾಸಕ ಬಸನಗೌಡ ದದ್ದಲ್

ಹಂಚಿಕೆಯಲ್ಲಿ ಯಾವುದೇ ತಾರತಮ್ಯಕ್ಕೆ ಅವಕಾಶ ನೀಡದೆ, ಮೇಲ್ಭಾಗ ಹಾಗೂ ಕೆಳಭಾಗದ ರೈತರ ಹಿತಾಸಕ್ತಿಯನ್ನು ಕಾಪಾಡಲು ಆದ್ಯತೆ ನೀಡಲಾಗುವುದು ಎಂದು ಭರವಸೆ ನೀಡಿದರು.

ಬಂಗಾರಪ್ಪ ಕೆರೆಯ ಬಲವರ್ಧನೆ, ಸಂರಕ್ಷಣೆ ಹಾಗೂ ದುರಸ್ತಿ ಕಾಮಗಾರಿಗಳನ್ನು ಅಂದಾಜು ₹100 ಕೋಟಿ ವೆಚ್ಚದಲ್ಲಿ ಕೈಗೊಳ್ಳಲು ಯೋಜಿಸಲಾಗಿದೆ. ಪ್ರಸ್ತುತ ಒಂದು ಟಿಎಂಸಿ ಇರುವ ಕೆರೆಯ ನೀರು ಸಂಗ್ರಹ ಸಾಮರ್ಥ್ಯವನ್ನು 2.5 ಟಿಎಂಸಿಗೆ ಹೆಚ್ಚಿಸುವ ಗುರಿ ಹೊಂದಲಾಗಿದೆ ಎಂದು ವಿವರಿಸಿದರು.

ಯೋಜನೆಯ ಮೊದಲ ಹಂತದಲ್ಲಿ ₹40 ಕೋಟಿ ಅನುದಾನ ಬಿಡುಗಡೆಯಾಗಿದ್ದು, ವಿವರವಾದ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸಲಾಗಿದೆ. ಕೆರೆಯ ಅಭಿವೃದ್ಧಿ ಕಾಮಗಾರಿಗಳನ್ನು ಆದ್ಯತೆಯ ಮೇರೆಗೆ ಶೀಘ್ರ ಆರಂಭಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ರೈತರಿಗೆ ಸಕಾಲದಲ್ಲಿ ನೀರು ಪೂರೈಸುವುದು, ಕೃಷಿ ಚಟುವಟಿಕೆಗಳಿಗೆ ಅಗತ್ಯವಾದ ನೀರಿನ ಲಭ್ಯತೆ ಖಚಿತಪಡಿಸುವುದು ಹಾಗೂ ಭವಿಷ್ಯದಲ್ಲಿ ಕುಡಿಯುವ ನೀರಿನ ಭದ್ರತೆ ಒದಗಿಸುವುದು ಸರ್ಕಾರದ ಪ್ರಮುಖ ಉದ್ದೇಶವಾಗಿದೆ. ಈ ನಿಟ್ಟಿನಲ್ಲಿ ಬಂಗಾರಪ್ಪ ಕೆರೆಯ ಸಮಗ್ರ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗುವುದು ಎಂದು ಶಾಸಕ ಬಸನಗೌಡ ದದ್ದಲ್ ಹೇಳಿದರು.

## ಎಚ್.ಡಿ. ಕುಮಾರಸ್ವಾಮಿ ವಿರುದ್ಧ ಟೀಕೆ ಮಾಡುವ ಬದಲು ಕ್ಷೇತ್ರದ ಅಭಿವೃದ್ಧಿಗೆ ಗಮನಹರಿಸಿ: ನರಸಪ್ಪ ಆಶಾಪುರ

ನಡೆದುಕೊಳ್ಳಬೇಕು. ರಾಜಕೀಯ ಭಿನ್ನಾಭಿಪ್ರಾಯಗಳಿದ್ದರೂ ವೈಯಕ್ತಿಕ ಟೀಕೆಗಳ ಬದಲು ಜನಪರ ಸಮಸ್ಯೆಗಳ ಕುರಿತು ಚರ್ಚಿಸಬೇಕು ಎಂದು ಸಲಹೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಎಚ್.ಕೆ. ರವಿ, ಎ. ರಾಮು, ಶರಣಪ್ಪ, ರಾಜು, ನರಸಿಂಹಲು ಕಟ್ಟಿಮನಿ ಹಾಗೂ ಪ್ರಕಾಶ್ ಉಪಸ್ಥಿತರಿದ್ದರು.

## ಅಂಬಾ ಮಠದ ವಿರುದ್ಧ ಅಪಪ್ರಚಾರಕ್ಕೆ ಮಹಿಳಾ ಭಕ್ತರ ಆಕ್ರೋಶ

ಕಾರ್ಯಕ್ರಮ, ಧಾರ್ಮಿಕ ಪ್ರವಚನ ಹಾಗೂ ಸಾಮಾಜಿಕ ಜಾಗೃತಿ ಕಾರ್ಯಕ್ರಮಗಳನ್ನು ನಡೆಸುತ್ತಿದೆ. ಮೂಢನಂಬಿಕೆ, ಮದ್ಯಪಾನ, ಜೂಜಾಟ ಮತ್ತು ಬಾಲ್ಯವಿವಾಹದ ವಿರುದ್ಧ ಗುರುಗಳು ಜಾಗೃತಿ ಮೂಡಿಸುತ್ತಿದ್ದಾರೆ ಎಂದರು.

ಮಠದ ಜಮೀನಿನ ಕುರಿತು ಗ್ರಾಮ ಪಂಚಾಯಿತಿ ಸಭೆಯಲ್ಲಿ ಠರಾವು ಅಂಗೀಕರಿಸಿ ಕಂದಾಯ ಇಲಾಖೆಗೆ ಪತ್ರ ಸಲ್ಲಿಸಲಾಗಿದೆ. ಜಾಗದ ವಿಚಾರದಲ್ಲಿ ಅನಗತ್ಯ ವಿವಾದ ಸೃಷ್ಟಿಸಲಾಗುತ್ತಿದೆ ಎಂದು ಆರೋಪಿಸಿದರು.

ಮಠದ ವಿರುದ್ಧ ಅಪಪ್ರಚಾರ ಮುಂದುವರಿದರೆ ವಿವಿಧ ಸಂಘಟನೆಗಳ ಸಹಯೋಗದಲ್ಲಿ ದೇವದುರ್ಗ ಪೊಲೀಸ್ ಠಾಣೆ ಎದುರು ಪ್ರತಿಭಟನೆ ನಡೆಸುವುದಾಗಿ ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಚನ್ನಮ್ಮ ಅರಕೇರಾ, ಭೀಮಮ್ಮ ಕಲಮಗೇರಾ, ಬಸಮ್ಮ ಗೆದ್ದಲಮಾರಿ, ರತ್ನಮ್ಮ, ರಣಮ್ಮ, ಮಂಜಮ್ಮ ಹಾಗೂ ಚನ್ನಮ್ಮ ಮದರಕಲ್ ಉಪಸ್ಥಿತರಿದ್ದರು.

## ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ: ಮತಗಟ್ಟೆಗಳ ಸಿದ್ಧತೆ ಪರಿಶೀಲಿಸಿದ ಜಿಲ್ಲಾಧಿಕಾರಿ ಪೂವಿತಾ ಎಸ್.

ಸುಸೂತ್ರವಾಗಿ ಪೂರ್ಣಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಸಿಬ್ಬಂದಿ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್. ನಿರ್ದೇಶನ ನೀಡಿದರು.

## ಶಿಕ್ಷಕರ ಸಮಸ್ಯೆಗಳ ಪರಿಹಾರಕ್ಕೆ ಶರಣಪ್ಪ ಮಟ್ಟೂರು ಬೆಂಬಲಿಸಿ: ಎ. ವಸಂತಕುಮಾರ ಮನವಿ

ಇಲಾಖೆಗಳಲ್ಲಿ ಖಾಲಿ ಇರುವ ಸುಮಾರು 32 ಸಾವಿರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ನಿರ್ಧರಿಸಿದೆ ಎಂದು ತಿಳಿಸಿದರು.

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಮೂಲಕ ಶಿಕ್ಷಣ ಕ್ಷೇತ್ರದ ಪ್ರಗತಿಗೆ ವಿಶೇಷ ಒತ್ತು ನೀಡಲಾಗುತ್ತಿದೆ. ಅಕ್ಷರ ಆವಿಷ್ಕಾರ ಯೋಜನೆಯಡಿ ಈ ಭಾಗದ ಶೈಕ್ಷಣಿಕ ಅಭಿವೃದ್ಧಿಗಾಗಿ ಹಲವು ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗಿದ್ದು, ಶಾಲೆಗಳ ಮೂಲಸೌಕರ್ಯ ಹಾಗೂ ಶಿಕ್ಷಣದ ಗುಣಮಟ್ಟ ಸುಧಾರಣೆಗೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ವಿವರಿಸಿದರು.

ಶಿಕ್ಷಕರ ಬೇಡಿಕೆಗಳಿಗೆ ಸ್ಪಂದಿಸುವ ಹಾಗೂ ಶಿಕ್ಷಣ ಕ್ಷೇತ್ರದ ಸಮಸ್ಯೆಗಳನ್ನು ವಿಧಾನ ಪರಿಷತ್ತಿನಲ್ಲಿ ಪ್ರಸ್ತಾಪಿಸುವ ಸಮರ್ಥ ಪ್ರತಿನಿಧಿಯ ಅಗತ್ಯವಿದೆ. ಈ ಹಿನ್ನೆಲೆಯಲ್ಲಿ ಶರಣಪ್ಪ ಮಟ್ಟೂರು ಅವರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡಿ ಬೆಂಬಲಿಸುವಂತೆ ಶಿಕ್ಷಕರಲ್ಲಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಕೆಪಿಸಿಸಿ ವಕ್ತಾರ ಡಾ. ರಝಾಕ್ ಉಸ್ತಾದ್, ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಅಬ್ದುಲ್ ಕರೀಂ ಸೇರಿದಂತೆ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಇಂದು ಪೋಕ್ಸೋ, ಮಾದಕ ದ್ರವ್ಯ ದುರುಪಯೋಗ ತಡೆ ಕಾನೂನು ಅರಿವು ಕಾರ್ಯಕ್ರಮ

ರಾಯಚೂರು ಅ. 22 (ಕರ್ನಾಟಕ ವಾರ್ತೆ): ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ರಾಯಚೂರು, ಜಿಲ್ಲಾ ನ್ಯಾಯವಾದಿಗಳ ಸಂಘ, ಶಿಕ್ಷಣ ಇಲಾಖೆ ಹಾಗೂ ವಿಧ್ಯಾಭಾರತಿ ಶಿಕ್ಷಣ ಕೇಂದ್ರ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಪೋಕ್ಸೋ ಕಾಯ್ದೆ ಹಾಗೂ ಮಾದಕ ದ್ರವ್ಯ ದುರುಪಯೋಗ ತಡೆ ಕುರಿತು ಕಾನೂನು ಅರಿವು ಕಾರ್ಯಕ್ರಮ ವಿದ್ಯಾ ಭಾರತಿ ಸಿಬಿಎಸ್‌ಸಿ ಶಾಲಾ ಆವರಣದಲ್ಲಿ ಅಕ್ಟೋಬರ್ 23ರ ಬೆಳಿಗ್ಗೆ 9.30ಕ್ಕೆ ಹಮ್ಮಿಕೊಳ್ಳಲಾಗಿದೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ

ಗೌರವಾನ್ವಿತ ಶ್ರೀ ಬಸಪ್ಪ ಬಾಲಪ್ಪ ಜಕಾತಿ ಅವರು ಉದ್ಘಾಟನೆ ನೆರವೇರಿಸುವರು.

ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ಶ್ರೀ ಹೆಚ್.ಶಶಿಧರ್ ಶೆಟ್ಟಿ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ರಾಯಚೂರಿನ ವಿದ್ಯಾ ಭಾರತಿ ಶಿಕ್ಷಣ ಕೇಂದ್ರದ ಕಾರ್ಯದರ್ಶಿ ಶ್ರೀನಿವಾಸ ನಂದಾಪುರ ಅವರು ಅಧ್ಯಕ್ಷತೆ ವಹಿಸುವರು.

ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಗೌರವಾನ್ವಿತ ಶ್ರೀ ಸಿದ್ದರಾಮಪ್ಪ ಕಲ್ಯಾಣರಾವ್, ರಾಯಚೂರು ವಕೀಲರ ಸಂಘದ ಅದ್ಯಕ್ಷರಾದ ಎನ್.ಶಿವಶಂಕ್ರ್, ರಾಯಚೂರು ಕ್ಷೇತ್ರ ಶಿಕ್ಷಣಾಧಿಕಾರಿ ಈರಣ್ಣ ಕೋಸಗಿ, ವಿದ್ಯಾ ಭಾರತಿ ಶಿಕ್ಷಣ ಸಂಸ್ಥೆಯ ಪ್ರಾಂಶುಪಾಲರಾದ ಕಾತ್ಯಾಯಿನಿ ಹೆಗಡೆಕಟ್ಟಿ, ಜಂಟಿ ಕಾರ್ಯದರ್ಶಿ ರಾಘವೇಂದ್ರ ಚೂಡಮಣಿ ಸೇರಿದಂತೆ ಇತರರು ಭಾಗಯಾಗಲಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಚೇರಿಯ ಪ್ರಕಟಣೆ ತಿಳಿಸಿದೆ.

# ಮಠ-ಮಾನ್ಯಗಳಿಂದ ಸಮಾಜದಲ್ಲಿ ಶಾಂತಿ, ಸೌಹಾರ್ದತೆ ವೃದ್ಧಿ: ಎನ್.ಎಸ್. ಬೋಸರಾಜು

ಪೀಠಾಧಿಪತಿ ಶ್ರೀ ರಾಚೋಟಿ ವೀರ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಕಿಲ್ಲೆ ಬೃಹನ್ಮಠದ ಪೀಠಾಧಿಪತಿ ಶ್ರೀ ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳಿಗೆ ಎನ್.ಎಸ್. ಬೋಸರಾಜು ಪುಷ್ಪಗುಚ್ಛ ನೀಡಿ ಗೌರವ ಸಲ್ಲಿಸಿದರು. ಬಳಿಕ ಶ್ರೀಗಳ ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಉಭಯ ಮಠಗಳ ಶ್ರೀಗಳು ಬೋಸರಾಜು ಅವರನ್ನು ಸನ್ಮಾನಿಸಿ ಆಶೀರ್ವಚನ ನೀಡಿದರು. ನಾಡಿನ ಸಮಸ್ತ ಜನತೆಗೆ ದಸರಾ ಹಬ್ಬದ ಶುಭಾಶಯ ಕೋರಿದ ಬೋಸರಾಜು, ಎಲ್ಲರ ಜೀವನದಲ್ಲಿ ಸಂತೋಷ, ಆರೋಗ್ಯ ಹಾಗೂ ಸಮೃದ್ಧಿ ನೆಲೆಸಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ. ಶಾಂತಪ್ಪ, ಮುಖಂಡರಾದ ಜಯವಂತರಾವ್ ಪತಂಗೆ, ಜಿ. ಶಿವಮೂರ್ತಿ, ಅಮರೇಗೌಡ ಹಂಚಿನಾಳ, ದರೂರ್ ಬಸವರಾಜ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಅಮೃತ ವಾಣಿ**

ತನ್ನನ್ನು ತಾನು ಗೆದ್ದವನು ನಿಜವಾದ ವಿಜಯಿ.

1625 ನೆಯ ದಿನಕ್ಕೆ ಏಮ್ಸ್ ಹೋರಾಟ

# ನಳಂದ ಶಿಕ್ಷಣ ಮಹಾವಿದ್ಯಾಲಯದಲ್ಲಿ ಮೂರು ದಿನಗಳ ಯೋಗ ತರಬೇತಿ ಶಿಬಿರ ಉದ್ಘಾಟನೆ




ರಾಯಚೂರು: ತಾಲೂಕಿನ ಯರಮರಸ್‌ನ ನಳಂದ ಶಿಕ್ಷಣ ಮಹಾವಿದ್ಯಾಲಯದಲ್ಲಿ ಬಿ.ಎಡ್ ದ್ವಿತೀಯ ಸೆಮಿಸ್ಟರ್ ಪ್ರಶಿಕ್ಷಣಾರ್ಥಿಗಳಿಗೆ ಆಯೋಜಿಸಿರುವ ಮೂರು ದಿನಗಳ ಯೋಗ ತರಬೇತಿ ಶಿಬಿರಕ್ಕೆ ಇತ್ತೀಚೆಗೆ ಚಾಲನೆ ನೀಡಲಾಯಿತು.

ಪತಂಜಲಿ ಯೋಗ ಸಮಿತಿಯ ರಾಯಚೂರು ಜಿಲ್ಲಾಧ್ಯಕ್ಷ ಋತುರಾಜ್ ಗೌಡ ಹಾಗೂ ಲಕ್ಷ್ಮಿ ನಾರಾಯಣ ಅವರು ಶಿಬಿರವನ್ನು ಉದ್ಘಾಟಿಸಿ, ಯೋಗಾಭ್ಯಾಸದ ಮಹತ್ವದ ಕುರಿತು ಪ್ರಶಿಕ್ಷಣಾರ್ಥಿಗಳಿಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಇಂದಿನ ಒತ್ತಡದ ಜೀವನಶೈಲಿಯಲ್ಲಿ ದೈಹಿಕ ಸದೃಢತೆ ಹಾಗೂ ಮಾನಸಿಕ ನೆಮ್ಮದಿ ಕಾಪಾಡಿಕೊಳ್ಳಲು ಯೋಗಾಭ್ಯಾಸ ಅತ್ಯಂತ ಸಹಕಾರಿಯಾಗಿದೆ. ನಿಯಮಿತವಾಗಿ ಯೋಗ ಮಾಡುವುದರಿಂದ ಏಕಾಗ್ರತೆ, ಆತ್ಮವಿಶ್ವಾಸ ಹಾಗೂ ಆರೋಗ್ಯ ವೃದ್ಧಿಯಾಗುತ್ತದೆ. ಭವಿಷ್ಯದಲ್ಲಿ ಶಿಕ್ಷಕರಾಗಿ ಸೇವೆ ಸಲ್ಲಿಸಲಿರುವ ಪ್ರಶಿಕ್ಷಣಾರ್ಥಿಗಳು ಯೋಗವನ್ನು ತಮ್ಮ ನಿತ್ಯದ ಬದುಕಿನಲ್ಲಿ ರೂಢಿಸಿಕೊಳ್ಳುವುದರ ಜೊತೆಗೆ ಶಾಲಾ ಮಕ್ಕಳಲ್ಲಿಯೂ ಯೋಗದ ಬಗ್ಗೆ ಆಸಕ್ತಿ ಮೂಡಿಸಬೇಕು ಎಂದು ಸಲಹೆ ನೀಡಿದರು.

ಶಿಬಿರದಲ್ಲಿ ಪ್ರಶಿಕ್ಷಣಾರ್ಥಿಗಳಿಗೆ ವಿವಿಧ ಯೋಗಾಸನಗಳನ್ನು ಪ್ರಾಯೋಗಿಕವಾಗಿ ಕಲಿಸಿಕೊಡಲಾಯಿತು. ಯೋಗಾಭ್ಯಾಸದ ವಿಧಾನಗಳು ಹಾಗೂ ಅವುಗಳಿಂದ ದೊರೆಯುವ ಆರೋಗ್ಯ ಪ್ರಯೋಜನಗಳ ಕುರಿತು ಮಾರ್ಗದರ್ಶನ ನೀಡಲಾಯಿತು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲ ಡಾ. ಸಿದ್ದಪ್ಪ ಜೇಗರ್, ಉಪನ್ಯಾಸಕರು ಹಾಗೂ ಬಿ.ಎಡ್ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

# ಅಯೋಡಿಯುಕ್ತ ಉಪ್ಪಿನ ಬಳಕೆಯಿಂದ ಆರೋಗ್ಯ ರಕ್ಷಣೆ ಸಾಧ್ಯ: ಅರವಿಂದ ಕುಮಾರ



ಬಿಚ್ಚಾಲಿ ಕ್ಯಾಂಪ್, ಅ.22: ಅಯೋಡಿನ್ ಕೊರತೆಯಿಂದ ಉಂಟಾಗುವ ಆರೋಗ್ಯ ಸಮಸ್ಯೆಗಳನ್ನು ತಡೆಗಟ್ಟಲು ಪ್ರತಿಯೊಂದು ಕುಟುಂಬವೂ ದಿನನಿತ್ಯದ ಆಹಾರದಲ್ಲಿ ಅಯೋಡಿಯುಕ್ತ ಉಪ್ಪನ್ನು ಬಳಸಬೇಕು ಎಂದು ಮಟಮಾರಿ ಆರೋಗ್ಯ ಕೇಂದ್ರದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಅರವಿಂದ ಕುಮಾರ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ಹಾಗೂ ಗಿಲ್ಲೆಸೂಗೂರು ಪ್ರಾಥಮಿಕ ಆರೋಗ್ಯ ಕೇಂದ್ರದ ವತಿಯಿಂದ ಬಿಚ್ಚಾಲಿ ಕ್ಯಾಂಪ್‌ನ ಅಂಗನವಾಡಿ ಕೇಂದ್ರದಲ್ಲಿ ವಿಶ್ವ ಅಯೋಡಿನ್ ಕೊರತೆ ದಿನಾಚರಣೆ ಅಂಗವಾಗಿ ಗರ್ಭಿಣಿಯರು, ಬಾಣಂತಿಯರು ಹಾಗೂ ಸಾರ್ವಜನಿಕರಿಗೆ ಆಯೋಜಿಸಿದ್ದ ಆರೋಗ್ಯ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರತಿವರ್ಷ ಅಕ್ಟೋಬರ್ 21ರಂದು ವಿಶ್ವ ಅಯೋಡಿನ್ ಕೊರತೆ ದಿನವನ್ನು ಆಚರಿಸಲಾಗುತ್ತಿದ್ದು, ಅಯೋಡಿನ್ ಪೋಷಕಾಂಶದ ಮಹತ್ವ ಹಾಗೂ ಅದರ ಕೊರತೆಯಿಂದ ಉಂಟಾಗುವ ಸಮಸ್ಯೆಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಈ ದಿನಾಚರಣೆಯ ಪ್ರಮುಖ ಉದ್ದೇಶವಾಗಿದೆ ಎಂದರು.

ಮಾನವನ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಯಲ್ಲಿ ಅಯೋಡಿನ್ ಪ್ರಮುಖ ಪಾತ್ರ ವಹಿಸುತ್ತದೆ. ಥೈರಾಯ್ಡ್ ಗ್ರಂಥಿಯು ಸರಿಯಾಗಿ ಕಾರ್ಯನಿರ್ವಹಿಸಲು ಅಯೋಡಿನ್ ಅತ್ಯಗತ್ಯವಾಗಿದ್ದು, ದೇಹದ ಚಯಾಪಚಯ ಕ್ರಿಯೆ, ಹೃದಯ ಬಡಿತ, ದೇಹದ ಉಷ್ಣತೆ ಹಾಗೂ ಸ್ನಾಯುಗಳ ಕಾರ್ಯನಿರ್ವಹಣೆಯನ್ನು ನಿಯಂತ್ರಿಸುವಲ್ಲಿ ಸಹಕಾರಿಯಾಗಿದೆ ಎಂದು ವಿವರಿಸಿದರು.

ವಿಶೇಷವಾಗಿ ಗರ್ಭಿಣಿಯರು, ಬಾಣಂತಿಯರು ಹಾಗೂ ಬೆಳೆಯುವ ಮಕ್ಕಳಿಗೆ ಅಯೋಡಿನ್ ಅತ್ಯಂತ ಅವಶ್ಯಕವಾಗಿದೆ. ಗರ್ಭಾವಸ್ಥೆಯಲ್ಲಿ ಅಯೋಡಿನ್ ಕೊರತೆ ಉಂಟಾದರೆ ಭ್ರೂಣದ ಬೆಳವಣಿಗೆಯ ಮೇಲೆ ದುಷ್ಪರಿಣಾಮ ಬೀರುವುದರ ಜೊತೆಗೆ ಗರ್ಭಪಾತ, ಮೃತಶಿಶು ಜನನದಂತಹ ಸಮಸ್ಯೆಗಳ ಅಪಾಯ ಹೆಚ್ಚಾಗಬಹುದು. ಮಕ್ಕಳಲ್ಲಿ ಅಯೋಡಿನ್ ಕೊರತೆಯಿಂದ ಬೌದ್ಧಿಕ ಬೆಳವಣಿಗೆ ಕುಂಠಿತಗೊಳ್ಳುವುದು, ಕಲಿಕಾ ಸಾಮರ್ಥ್ಯ ಕಡಿಮೆಯಾಗುವುದು ಹಾಗೂ ದೈಹಿಕ ಬೆಳವಣಿಗೆಯಲ್ಲಿ ಸಮಸ್ಯೆಗಳು ಕಾಣಿಸಿಕೊಳ್ಳುವ ಸಾಧ್ಯತೆಯಿದೆ ಎಂದು ತಿಳಿಸಿದರು.

ಅಯೋಡಿನ್ ಕೊರತೆಯಿಂದ ಕಂಠಮಾಲೆ (ಗಾಯಿಟರ್) ಸೇರಿದಂತೆ ವಿವಿಧ ಆರೋಗ್ಯ ಸಮಸ್ಯೆಗಳು ಉಂಟಾಗಬಹುದು. ಇವುಗಳನ್ನು ತಡೆಗಟ್ಟಲು ಸಾರ್ವಜನಿಕರು ಅಯೋಡಿಯುಕ್ತ ಉಪ್ಪಿನ ಬಳಕೆಗೆ ಆದ್ಯತೆ ನೀಡಬೇಕು. ಆರೋಗ್ಯಕರ ಜೀವನಕ್ಕೆ ಪೌಷ್ಟಿಕ ಆಹಾರದ ಜೊತೆಗೆ ಅಗತ್ಯ ಸೂಕ್ಷ್ಮ ಪೋಷಕಾಂಶಗಳ ಸೇವನೆಯೂ ಮುಖ್ಯವಾಗಿದೆ ಎಂದು ಸಲಹೆ ನೀಡಿದರು.

ನಂತರ ಮಾತನಾಡಿದ ಪ್ರಾಥಮಿಕ ಆರೋಗ್ಯ ಸುರಕ್ಷಾ ಅಧಿಕಾರಿ ಚೆನ್ನವೀರಮ್ಮ, ಅಯೋಡಿನ್ ಕೊರತೆ ನಿವಾರಣೆಯಲ್ಲಿ ಸಾರ್ವಜನಿಕರ ಸಹಭಾಗಿತ್ವ ಅತ್ಯಂತ ಅಗತ್ಯವಾಗಿದೆ. ಪ್ರತಿಯೊಂದು ಮನೆಯಲ್ಲಿಯೂ ಅಯೋಡಿಯುಕ್ತ ಉಪ್ಪು ಬಳಸುವ ಮೂಲಕ ಕುಟುಂಬದ ಸದಸ್ಯರ ಆರೋಗ್ಯ ಕಾಪಾಡಿಕೊಳ್ಳಬೇಕು. ವಿಶೇಷವಾಗಿ ತಾಯಂದಿರು ಮಕ್ಕಳ ಪೌಷ್ಟಿಕಾಂಶದ ಅಗತ್ಯಗಳ ಬಗ್ಗೆ ಹೆಚ್ಚಿನ ಗಮನ ಹರಿಸಬೇಕು ಎಂದು ಹೇಳಿದರು.

ಅಯೋಡಿಯುಕ್ತ ಉಪ್ಪು ಆರೋಗ್ಯದ ಗುಟ್ಟು ಎಂಬ ಸಂದೇಶದೊಂದಿಗೆ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಗೆ ಆರೋಗ್ಯ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಆಶಾ ಕಾರ್ಯಕರ್ತೆ ನಿರ್ಮಲ, ಅಂಗನವಾಡಿ ಸಹಾಯಕಿ ದುರ್ಗಮ್ಮ ಸೇರಿದಂತೆ ಗರ್ಭಿಣಿಯರು, ಬಾಣಂತಿಯರು ಹಾಗೂ ಸ್ಥಳೀಯ ಸಾರ್ವಜನಿಕರು ಉಪಸ್ಥಿತರಿದ್ದರು.

# ಅಯೋಡಿನ್ ಕೊರತೆ ತಡೆಗಟ್ಟಲು ಅಯೋಡಿನ್‌ಯುಕ್ತ ಉಪ್ಪು ಬಳಸಿ: ಬಾಲಪ್ಪ ನಾಯಕ



ಸಿಂಧನೂರು: ಅಯೋಡಿನ್ ಕೊರತೆಯಿಂದ ಉಂಟಾಗುವ ಆರೋಗ್ಯ ಸಮಸ್ಯೆಗಳನ್ನು ತಡೆಗಟ್ಟಲು ಪ್ರತಿಯೊಂದು ಕುಟುಂಬವೂ ಅಯೋಡಿನ್‌ಯುಕ್ತ ಉಪ್ಪಿನ ಬಳಕೆಗೆ ಆದ್ಯತೆ ನೀಡಬೇಕು ಎಂದು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು, ಜವಳಗೇರಾ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಿಂಧನೂರಿನ ಸನ್ ರೈಸ್ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳ ಸಂಯುಕ್ತಾಶ್ರಯದಲ್ಲಿ ಜವಳಗೇರಾದ ಅಮೃತ ನಗರದ ಸಮುದಾಯ ಭವನದಲ್ಲಿ ಆಯೋಜಿಸಿದ್ದ ವಿಶ್ವ ಅಯೋಡಿನ್ ದಿನಾಚರಣೆ ಹಾಗೂ ಆರೋಗ್ಯ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಯೋಡಿನ್ ಮಾನವನ ದೇಹದ ಬೆಳವಣಿಗೆಗೆ ಅತ್ಯಗತ್ಯವಾದ ಸೂಕ್ಷ್ಮ ಪೋಷಕಾಂಶವಾಗಿದೆ. ಥೈರಾಯ್ಡ್ ಗ್ರಂಥಿಯ ಸಮರ್ಪಕ ಕಾರ್ಯನಿರ್ವಹಣೆಗೆ ಅಯೋಡಿನ್ ಪ್ರಮುಖ ಪಾತ್ರ ವಹಿಸುತ್ತದೆ. ವಿಶೇಷವಾಗಿ ಗರ್ಭಿಣಿಯರು, ಬಾಣಂತಿಯರು ಹಾಗೂ ಮಕ್ಕಳ ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೆ ಅಯೋಡಿನ್ ಅಗತ್ಯವಾಗಿದೆ ಎಂದು ವಿವರಿಸಿದರು.

ದೇಹದಲ್ಲಿ ಅಯೋಡಿನ್ ಕೊರತೆ ಉಂಟಾದರೆ ಕಂಠಮಾಲೆ (ಗಾಯಿಟರ್), ಮಕ್ಕಳ ದೈಹಿಕ ಬೆಳವಣಿಗೆಯಲ್ಲಿ ಕುಂಠಿತತೆ ಹಾಗೂ ಬೌದ್ಧಿಕ ಬೆಳವಣಿಗೆಯ ಮೇಲೆ ದುಷ್ಪರಿಣಾಮ ಉಂಟಾಗುವ ಸಾಧ್ಯತೆಯಿದೆ. ಹೀಗಾಗಿ ಸಾರ್ವಜನಿಕರು ತಮ್ಮ ದೈನಂದಿನ ಆಹಾರದಲ್ಲಿ ಅಯೋಡಿನ್‌ಯುಕ್ತ ಉಪ್ಪನ್ನು ಬಳಸುವ ಮೂಲಕ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು ಎಂದು ಸಲಹೆ ನೀಡಿದರು.

ಅಯೋಡಿನ್‌ಯುಕ್ತ ಉಪ್ಪನ್ನು ತೇವಾಂಶವಿಲ್ಲದ, ಮುಚ್ಚಿದ ಪಾತ್ರೆಯಲ್ಲಿ ಸಂಗ್ರಹಿಸಬೇಕು. ಅಡುಗೆಯಲ್ಲಿ ಉಪ್ಪನ್ನು ಸೂಕ್ತ ಸಮಯದಲ್ಲಿ ಬಳಸುವುದರಿಂದ ಅಯೋಡಿನ್ ನಷ್ಟವನ್ನು ಕಡಿಮೆ ಮಾಡಬಹುದು. ಉಪ್ಪಿಗಿಂತ ರುಚಿಯಿಲ್ಲ, ತಾಯಿಗಿಂತ ಬಂಧುವಿಲ್ಲ ಎಂಬ ನಾಣ್ಣುಡಿಯನ್ನು ಉಲ್ಲೇಖಿಸಿದ ಅವರು, ಆಹಾರದಲ್ಲಿ ಉಪ್ಪಿನ ಮಹತ್ವದ ಜೊತೆಗೆ ಅಯೋಡಿನ್‌ನ ಅಗತ್ಯವನ್ನೂ ಪ್ರತಿಯೊಬ್ಬರೂ ಅರಿತುಕೊಳ್ಳಬೇಕು ಎಂದು ತಿಳಿಸಿದರು.

ಸನ್ ರೈಸ್ ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲ ಲಾಜರ್ ಸಿರಲ್ ಮಾತನಾಡಿ, ಅಯೋಡಿನ್ ಕೊರತೆಯಿಂದ ಉಂಟಾಗುವ ಆರೋಗ್ಯ ಸಮಸ್ಯೆಗಳ ತಡೆಗಟ್ಟುವಿಕೆಯಲ್ಲಿ ಸಾರ್ವಜನಿಕರ ಸಹಕಾರ ಅತ್ಯಂತ ಮುಖ್ಯವಾಗಿದೆ. ಪ್ರತಿಯೊಂದು ಕುಟುಂಬವೂ ಅಯೋಡಿನ್‌ಯುಕ್ತ ಉಪ್ಪಿನ ಬಳಕೆಗೆ ಆದ್ಯತೆ ನೀಡಬೇಕು. ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುವ ಇಂತಹ ಕಾರ್ಯಕ್ರಮಗಳ ಪ್ರಯೋಜನವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಅಯೋಡಿನ್‌ಯುಕ್ತ ಉಪ್ಪಿನ ಬಳಕೆ ಆರೋಗ್ಯಕರ ಜೀವನಕ್ಕೆ ಅಡಿಪಾಯ ಎಂಬ ಸಂದೇಶದೊಂದಿಗೆ ಸಾರ್ವಜನಿಕರಿಗೆ ಆರೋಗ್ಯ ಶಿಕ್ಷಣ ನೀಡಲಾಯಿತು.

ಈ ಸಂದರ್ಭದಲ್ಲಿ ಸ್ಥಳೀಯ ಸಾರ್ವಜನಿಕರು, ತಾಯಂದಿರು ಹಾಗೂ ಸನ್ ರೈಸ್ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕಿಲ್ಲೇ ಬೃಹನ್ಮಠದಲ್ಲಿ ವಿಜಯದಶಮಿ ಸಂಭ್ರಮ: ಭಕ್ತರಿಂದ ಬನ್ನಿ ವಿನಿಮಯ, ವಿಶೇಷ ಪೂಜೆ



ರಾಯಚೂರು: ನಗರದ ಕಿಲ್ಲೇ ಬೃಹನ್ಮಠದಲ್ಲಿ ವಿಜಯದಶಮಿ ಹಬ್ಬವನ್ನು ಶ್ರೀಮಠದ ಪೀಠಾಧಿಪತಿ ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳ ನೇತೃತ್ವದಲ್ಲಿ ಭಕ್ತಿ, ಶ್ರದ್ಧೆ ಹಾಗೂ ಸಂಭ್ರಮದಿಂದ ಆಚರಿಸಲಾಯಿತು. ಹಬ್ಬದ ಅಂಗವಾಗಿ ಶ್ರೀಮಠದ ಆವರಣದಲ್ಲಿರುವ ಬನ್ನಿ ಮಂಟಪದಲ್ಲಿ ವಿಶೇಷ ಪೂಜೆ ಹಾಗೂ ಸಾಂಪ್ರದಾಯಿಕ ಬನ್ನಿ ಮುಡಿಯುವ ಕಾರ್ಯಕ್ರಮ ನೆರವೇರಿತು.

ಶ್ರೀಮಠದ ಕಾರ್ಯದರ್ಶಿ ವೇ. ಮೂ. ರೇಣುಕಾರಾಧ್ಯಯ್ಯ ಸ್ವಾಮಿಯವರ ಪೌರೋಹಿತ್ಯದಲ್ಲಿ ವಿವಿಧ ಧಾರ್ಮಿಕ ಪೂಜಾ ಕೈಂಕರ್ಯಗಳು ಜರುಗಿದವು. ಬಳಿಕ ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳು ಮಹಾಮಂಗಳಾರತಿ ನೆರವೇರಿಸಿ, ಶ್ರೀಮಠದ ಸಾಂಪ್ರದಾಯಿಕ ಖಡ್ಗದಿಂದ ಬನ್ನಿ ಮಹಾಂಕಾಳಿಯ ಒಂದು ಕೊಂಬೆಯ ಬನ್ನಿ ಪತ್ರಿಯನ್ನು ಕತ್ತರಿಸಿ ದೇವಿಗೆ ಸಮರ್ಪಿಸಿದರು.

ಈ ಸಂದರ್ಭದಲ್ಲಿ ನಾಡಿನ ಜನತೆಗೆ ಸುಖ, ಶಾಂತಿ, ಆರೋಗ್ಯ ಹಾಗೂ ನೆಮ್ಮದಿ ದೊರೆಯಲಿ. ಹಿಂಗಾರು ಮಳೆ ಸಮೃದ್ಧವಾಗಿ ಸುರಿದು ರೈತರ ಬದುಕಿನಲ್ಲಿ ಸಂತಸ ಮೂಡಲಿ ಎಂದು ಮಹಾಸ್ವಾಮಿಗಳು ಪ್ರಾರ್ಥಿಸಿದರು.

ನಂತರ ಜಗದ್ಗುರು ರೇಣುಕಾಚಾರ್ಯರು ಹಾಗೂ ಲಿಂ. ಗುರುಪಾದೇಶ್ವರರ ಮೂರ್ತಿಗಳಿಗೆ ಬನ್ನಿ ಸಮರ್ಪಿಸಲಾಯಿತು. ಶ್ರೀಮಠದಲ್ಲಿ ಪ್ರತಿಷ್ಠಾಪಿಸಿರುವ ತಾಯಿ ಶಾಂಭವಿಯ ರಜತ ಮೂರ್ತಿ ಹಾಗೂ ಘಟಸ್ಥಾಪನೆ ಮಾಡಿರುವ ಚಾಮುಂಡಿ ದೇವಿಗೂ ವಿಶೇಷ ಪೂಜೆ ಸಲ್ಲಿಸಿ ಬನ್ನಿ ಅರ್ಪಿಸಲಾಯಿತು.

ಕಾರ್ಯಕ್ರಮದಲ್ಲಿ ಶ್ರೀಮಠದ ಪ್ರಧಾನ ಕಾರ್ಯದರ್ಶಿ ವೇ.ಮೂ. ಪಂಪಾಪತಿ ಶಾಸ್ತ್ರಿಗಳು ಹಾಗೂ ಅವರ ಕುಟುಂಬಸ್ಥರು ಭಾಗವಹಿಸಿದ್ದರು. ಶ್ರೀಮಠದ ಭಕ್ತರು ಮಹಾಸ್ವಾಮಿಗಳಿಗೆ ಬನ್ನಿ ಪತ್ರಿ ಹಾಗೂ ಭಕ್ತಿ ಕಾಣಿಕೆ ಸಮರ್ಪಿಸಿ ಆಶೀರ್ವಾದ ಪಡೆದರು.

ಪೂಜಾ ಕಾರ್ಯಕ್ರಮದ ಬಳಿಕ ಶ್ರೀಮಠದ ಆವರಣದಲ್ಲಿ ಭಕ್ತರು ಪರಸ್ಪರ ಬನ್ನಿ ಪತ್ರಿ ವಿನಿಮಯ ಮಾಡಿಕೊಂಡರು. ಬನ್ನಿ ತಗೊಂಡು ಬಂಗಾರವಾಗಿರೋಣ, ನಮ್ಮ ಬನ್ನಿ ನಿಮ್ಮ ಬಾಳಲ್ಲಿ ಬಂಗಾರವಾಗಲಿ ಎಂದು ಶುಭ ಹಾರೈಸುವ ಮೂಲಕ ವಿಜಯದಶಮಿ ಹಬ್ಬದ ಸಂಪ್ರದಾಯವನ್ನು ಆಚರಿಸಿದರು.

ದೈನಂದಿನ ಜೀವನದಲ್ಲಿನ ದ್ವೇಷ, ಅಸೂಯೆ ಹಾಗೂ ಭಿನ್ನಾಭಿಪ್ರಾಯಗಳನ್ನು ಮರೆತು ಪರಸ್ಪರ ಪ್ರೀತಿ, ವಿಶ್ವಾಸ ಮತ್ತು ಸೌಹಾರ್ದದಿಂದ ಬಾಳುವ ಸಂದೇಶವನ್ನು ಬನ್ನಿ ವಿನಿಮಯದ ಮೂಲಕ ಸಾರಲಾಯಿತು.

ನೂರಾರು ಭಕ್ತರು ಹೊಸ ಉಡುಪುಗಳನ್ನು ಧರಿಸಿ ಶ್ರೀಮಠಕ್ಕೆ ಆಗಮಿಸಿ ವಿಶೇಷ ಪೂಜೆಯಲ್ಲಿ ಪಾಲ್ಗೊಂಡು ವಿಜಯದಶಮಿ ಹಬ್ಬವನ್ನು ಸಡಗರದಿಂದ ಆಚರಿಸಿದರು.

# ಹರನಹಳ್ಳಿಯಲ್ಲಿ ಶ್ರೀದೇವಿ ಪುರಾಣ ಮಹಾಮಂಗಲೋತ್ಸವ: ಕಳಸ ಕುಂಭಗಳೊಂದಿಗೆ ಭವ್ಯ ಮೆರವಣಿಗೆ



ಮಾನ್ವಿ: ತಾಲೂಕಿನ ಹರನಹಳ್ಳಿ ಗ್ರಾಮದ ಶ್ರೀ ರಾಮಲಿಂಗೇಶ್ವರ ದೇವಸ್ಥಾನದಲ್ಲಿ ಶರನ್ನವರಾತ್ರಿ ಮಹೋತ್ಸವದ ಅಂಗವಾಗಿ ಆಯೋಜಿಸಿದ್ದ ಶ್ರೀದೇವಿ ಪುರಾಣ ಮಹಾಮಂಗಲೋತ್ಸವವು ಧಾರ್ಮಿಕ ಕಾರ್ಯಕ್ರಮಗಳು, ದೇವಿಯ ಭಾವಚಿತ್ರ ಮೆರವಣಿಗೆ ಹಾಗೂ ಸಾಂಸ್ಕೃತಿಕ ಪ್ರದರ್ಶನಗಳೊಂದಿಗೆ ಸಂಭ್ರಮದಿಂದ ನೆರವೇರಿತು.

ಮಹಾಮಂಗಲೋತ್ಸವದ ಪ್ರಯುಕ್ತ ಗ್ರಾಮದ ಪ್ರಮುಖ ಬೀದಿಗಳಲ್ಲಿ ಶ್ರೀದೇವಿಯ ಭಾವಚಿತ್ರವನ್ನು ಮೆರವಣಿಗೆ ಮಾಡಲಾಯಿತು. ಸುಮಂಗಲಿಯರು ಸಾಂಪ್ರದಾಯಿಕ ಉಡುಗೆ ತೊಟ್ಟು ಕಳಸ ಕುಂಭಗಳನ್ನು ಹೊತ್ತು ಮೆರವಣಿಗೆಯಲ್ಲಿ ಭಾಗವಹಿಸಿದರು. ವಿವಿಧ ಕಲಾ ತಂಡಗಳೊಂದಿಗೆ ಸಾಗಿದ ಮೆರವಣಿಗೆಯು ಶ್ರೀ ರಾಮಲಿಂಗೇಶ್ವರ ದೇವಸ್ಥಾನಕ್ಕೆ ತಲುಪಿತು.

ನಂತರ ನಡೆದ ಧಾರ್ಮಿಕ ಸಭೆಯಲ್ಲಿ ರಾಯಚೂರಿನ ಸೋಮವಾರಪೇಟೆ ಸಂಸ್ಥಾನ ಹಿರೇಮಠದ ಶ್ರೀ ಅಭಿನವ ರಾಚೋಟಿವೀರ ಶಿವಾಚಾರ್ಯ ಸ್ವಾಮಿಗಳು ಆಶೀರ್ವಚನ ನೀಡಿ, ವಿಜಯದಶಮಿ ಹಬ್ಬವು ಕೆಟ್ಟದರ ವಿರುದ್ಧ ಒಳ್ಳೆಯದರ ವಿಜಯವನ್ನು ಸಾರುವ ಪವಿತ್ರ ದಿನವಾಗಿದೆ. ಮನುಷ್ಯನ ಜೀವನದಲ್ಲಿ ಸನ್ಮಾರ್ಗ, ಸದ್ವಿಚಾರ ಹಾಗೂ ಸಕಾರಾತ್ಮಕ ಚಿಂತನೆಗಳಿಗೆ ಹೆಚ್ಚಿನ ಮಹತ್ವ ನೀಡಬೇಕು ಎಂದು ತಿಳಿಸಿದರು.

ಶ್ರೀದೇವಿ ಪುರಾಣದ ಶ್ರವಣದಿಂದ ಮನಸ್ಸಿನಲ್ಲಿ ಉತ್ತಮ ಆಲೋಚನೆಗಳು ಮೂಡುತ್ತವೆ. ಧಾರ್ಮಿಕ ಆಚರಣೆಗಳು ಮನುಷ್ಯನಲ್ಲಿ ನೈತಿಕ ಮೌಲ್ಯಗಳನ್ನು ಬೆಳೆಸುವುದರ ಜೊತೆಗೆ ಬದುಕಿನಲ್ಲಿ ಉನ್ನತಿ ಸಾಧಿಸಲು ಪ್ರೇರಣೆ ನೀಡುತ್ತವೆ. ಪ್ರತಿಯೊಬ್ಬರೂ ಧರ್ಮ, ಸಂಸ್ಕೃತಿ ಹಾಗೂ ಪರಂಪರೆಯ ಮಹತ್ವವನ್ನು ಅರಿತು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಹಿರೇಮಠದ ಶ್ರೀ ರಾಚೋಟೇಶ್ವರ ಶಿವಾಚಾರ್ಯ ಸ್ವಾಮಿಗಳು ಶ್ರೀದೇವಿ ಪುರಾಣ ಪ್ರವಚನ ನೀಡಿದರು. ಹಾಲಸಮುದ್ರದ ಅಯ್ಯಪ್ಪ ವಿ.ಎಂ. ಮರಳಿ ಅವರು ಸಂಗೀತ ಸೇವೆ ಸಲ್ಲಿಸಿದರೆ, ಚಿನ್ಮಳ್ಳಿಯ ಶಂಕ್ರಯ್ಯ ಹಿರೇಮಠ ತಬಲ ಸಾಥ್ ನೀಡಿದರು.

ಇದೇ ಸಂದರ್ಭದಲ್ಲಿ ಕಲಾವಿದರು ಭಕ್ತಿಗೀತೆಗಳಿಗೆ ನೃತ್ಯ ಪ್ರದರ್ಶಿಸಿ ಭಕ್ತರ ಗಮನ ಸೆಳೆದರು. ಧಾರ್ಮಿಕ ಪ್ರವಚನ, ಸಂಗೀತ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಿಂದ ಮಹಾಮಂಗಲೋತ್ಸವಕ್ಕೆ ವಿಶೇಷ ಮೆರುಗು ದೊರೆಯಿತು.

ಗ್ರಾಮದ ನೂರಾರು ಭಕ್ತರು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿ ಶ್ರೀದೇವಿಯ ದರ್ಶನ ಪಡೆದು ಭಕ್ತಿಭಾವದಿಂದ ಮಹಾಮಂಗಲೋತ್ಸವವನ್ನು ಆಚರಿಸಿದರು.

# ಈಶಾನ್ಯ ಶಿಕ್ಷಕರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಪರ ಡಿ.ಎಸ್. ಹೂಲಗೇರಿ ಮತಯಾಚನೆ




ಹಟ್ಟಿ ಚಿನ್ನದ ಗಣಿ: ಈಶಾನ್ಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆ ಹಿನ್ನೆಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಅವರ ಪರ ಕೆಪಿಸಿಸಿ ರಾಜ್ಯ ಉಪಾಧ್ಯಕ್ಷ ಹಾಗೂ ಲಿಂಗಸುಗೂರು ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಡಿ.ಎಸ್. ಹೂಲಗೇರಿ ಅವರು ಶಿಕ್ಷಕರಲ್ಲಿ ಮತಯಾಚನೆ ನಡೆಸಿದರು.

ಲಿಂಗಸುಗೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಹಟ್ಟಿ ಪಟ್ಟಣದ ಶ್ರೀ ವಿನಾಯಕ ಕಾಲೇಜಿಗೆ ಭೇಟಿ ನೀಡಿದ ಅವರು, ಶಿಕ್ಷಕರು ಹಾಗೂ ಉಪನ್ಯಾಸಕರೊಂದಿಗೆ ಸಮಾಲೋಚನೆ ನಡೆಸಿ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಅವರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಡಿ.ಎಸ್. ಹೂಲಗೇರಿ, ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸುವ ಹಾಗೂ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುವ ಸಮರ್ಥ ಪ್ರತಿನಿಧಿಯನ್ನು ವಿಧಾನ ಪರಿಷತ್ತಿಗೆ ಆಯ್ಕೆ ಮಾಡುವುದು ಅಗತ್ಯವಾಗಿದೆ. ಶಿಕ್ಷಕರ ಹಕ್ಕುಗಳ ರಕ್ಷಣೆ, ಸೇವಾ ಭದ್ರತೆ ಹಾಗೂ ಶಿಕ್ಷಣ ಕ್ಷೇತ್ರದ ಸುಧಾರಣೆಗೆ ಕಾಂಗ್ರೆಸ್ ಪಕ್ಷ ಬದ್ಧವಾಗಿದೆ ಎಂದು ಹೇಳಿದರು.

ಶಿಕ್ಷಕರು ಎದುರಿಸುತ್ತಿರುವ ವಿವಿಧ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಕಲ್ಪಿಸುವುದು, ಅವರ ಸೇವಾ ಹಿತಾಸಕ್ತಿಗಳನ್ನು ಕಾಪಾಡುವುದು ಹಾಗೂ ಶಿಕ್ಷಣ ಕ್ಷೇತ್ರಕ್ಕೆ ಸಂಬಂಧಿಸಿದ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತರುವುದು ಪ್ರಮುಖ ಜವಾಬ್ದಾರಿಯಾಗಿದೆ. ಈ ನಿಟ್ಟಿನಲ್ಲಿ ಶರಣಪ್ಪ ಮಟ್ಟೂರು ಅವರು ಶಿಕ್ಷಕರ ಧ್ವನಿಯಾಗಿ ವಿಧಾನ ಪರಿಷತ್ತಿನಲ್ಲಿ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಶಿಕ್ಷಣ ಕ್ಷೇತ್ರದ ಸಮಸ್ಯೆಗಳ ಬಗ್ಗೆ ಅರಿವು ಹೊಂದಿರುವ ಶರಣಪ್ಪ ಮಟ್ಟೂರು ಅವರಿಗೆ ಶಿಕ್ಷಕರು ಬೆಂಬಲ ನೀಡಬೇಕು. ಶಿಕ್ಷಕರ ಹಿತಾಸಕ್ತಿಗಳನ್ನು ಪ್ರತಿನಿಧಿಸುವ ಅಭ್ಯರ್ಥಿಯನ್ನು ಆಯ್ಕೆ ಮಾಡುವ ಮೂಲಕ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಮತಯಾಚನೆ ಸಂದರ್ಭದಲ್ಲಿ ಲಿಂಗಸುಗೂರು ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಗೋವಿಂದ ನಾಯಕ, ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಮಹಮ್ಮದ್ ರಫಿ, ಹಟ್ಟಿ ನಗರ ಘಟಕದ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಹ್ಮದ್ ಬಾಬಾ, ವಕೀಲ ಮುದಕಪ್ಪ, ಅಮ್ಜದ್ ಶೇಠ್, ನಾಗರೆಡ್ಡೆಪ್ಪ ನಗನೂರು, ಮಹಾಲಿಂಗಪ್ಪ, ರಾಜಶೇಖರ ಪಲ್ಲೇದ್ ಸೇರಿದಂತೆ ಕಾಂಗ್ರೆಸ್ ಪಕ್ಷದ ಮುಖಂಡರು, ಶಾಲಾ-ಕಾಲೇಜುಗಳ ಶಿಕ್ಷಕರು ಹಾಗೂ ಉಪನ್ಯಾಸಕರು ಉಪಸ್ಥಿತರಿದ್ದರು.

# ಕಲ್ಮಠದಲ್ಲಿ ವಿಜಯದಶಮಿ ಸಂಭ್ರಮ: ವಿರೂಪಾಕ್ಷ ಪಂಡಿತಾರಾಧ್ಯ ಶ್ರೀಗಳಿಗೆ ಭಕ್ತರಿಂದ ಬನ್ನಿ ಸಮರ್ಪಣೆ



ಮಾನ್ವಿ: ಪಟ್ಟಣದ ಪ್ರಸಿದ್ಧ ಶ್ರೀ ಕಲ್ಮಠದಲ್ಲಿ ಬುಧವಾರ ವಿಜಯದಶಮಿ ಹಬ್ಬವನ್ನು ಭಕ್ತಿ, ಶ್ರದ್ಧೆ ಹಾಗೂ ಸಂಭ್ರಮದಿಂದ ಆಚರಿಸಲಾಯಿತು. ಹಬ್ಬದ ಅಂಗವಾಗಿ ಶ್ರೀಮಠದ ಪೀಠಾಧಿಪತಿ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳಿಗೆ ಸಾರ್ವಜನಿಕರು, ಗಣ್ಯರು ಹಾಗೂ ಭಕ್ತರು ಬನ್ನಿ ಪತ್ರಿ ಸಮರ್ಪಿಸಿ ಆಶೀರ್ವಾದ ಪಡೆದರು.

ನಾಡಹಬ್ಬ ದಸರಾ ಮಹೋತ್ಸವದ ಪ್ರಮುಖ ಆಚರಣೆಗಳಲ್ಲಿ ಒಂದಾದ ವಿಜಯದಶಮಿ ಪ್ರಯುಕ್ತ ಶ್ರೀಮಠಕ್ಕೆ ಆಗಮಿಸಿದ ಭಕ್ತರು ಶ್ರೀಗಳ ದರ್ಶನ ಪಡೆದು, ಪರಸ್ಪರ ಬನ್ನಿ ವಿನಿಮಯ ಮಾಡಿಕೊಂಡು ಶುಭಾಶಯಗಳನ್ನು ಕೋರಿದರು. ಸಾಂಪ್ರದಾಯಿಕ ಉಡುಗೆ ತೊಟ್ಟು ಆಗಮಿಸಿದ್ದ ಭಕ್ತರಿಂದ ಶ್ರೀಮಠದ ಆವರಣದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.

ವಿಜಯದಶಮಿ ಹಬ್ಬವು ದುಷ್ಟಶಕ್ತಿಗಳ ವಿರುದ್ಧ ಶಿಷ್ಟಶಕ್ತಿಯ ವಿಜಯದ ಸಂಕೇತವಾಗಿದ್ದು, ಬನ್ನಿ ವಿನಿಮಯವು ಪರಸ್ಪರ ಪ್ರೀತಿ, ವಿಶ್ವಾಸ ಹಾಗೂ ಬಾಂಧವ್ಯವನ್ನು ಗಟ್ಟಿಗೊಳಿಸುವ ಸಂಪ್ರದಾಯವಾಗಿದೆ. ಹಿರಿಯರಿಗೆ ಗೌರವ ಸಲ್ಲಿಸುವುದು, ಕಿರಿಯರಿಗೆ ಶುಭ ಹಾರೈಸುವುದು ಹಾಗೂ ಭಿನ್ನಾಭಿಪ್ರಾಯಗಳನ್ನು ಮರೆತು ಸೌಹಾರ್ದದಿಂದ ಬದುಕುವ ಸಂದೇಶವನ್ನು ಈ ಆಚರಣೆ ಸಾರುತ್ತದೆ.

ಶ್ರೀಮಠಕ್ಕೆ ಆಗಮಿಸಿದ ಭಕ್ತರು ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳಿಗೆ ಬನ್ನಿ ಅರ್ಪಿಸಿ, ತಮ್ಮ ಕುಟುಂಬದ ಸುಖ, ಶಾಂತಿ ಹಾಗೂ ಸಮೃದ್ಧಿಗಾಗಿ ಆಶೀರ್ವಾದ ಪಡೆದರು. ಸಾರ್ವಜನಿಕರು ಹಾಗೂ ಗಣ್ಯರು ಪರಸ್ಪರ ಹಬ್ಬದ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು.

ವಿಜಯದಶಮಿ ಪ್ರಯುಕ್ತ ಶ್ರೀಮಠದಲ್ಲಿ ಭಕ್ತರ ಆಗಮನದಿಂದ ಸಂಭ್ರಮ ಮನೆಮಾಡಿದ್ದು, ಬನ್ನಿ ಸಮರ್ಪಣೆಯೊಂದಿಗೆ ಹಬ್ಬದ ಆಚರಣೆ ನಡೆಯಿತು.

# ಡಾ. ಪಂಚಾಕ್ಷರಿ ಶಿವಾಚಾರ್ಯರ ಸಾರೋಟ ಮೆರವಣಿಗೆ: 11 ದಿನಗಳ ದಸರಾ ಮಹೋತ್ಸವ ಸಂಪನ್ನ



ಸಿರವಾರ: ಸಮೀಪದ ನೀಲೋಗಲ್ ಗ್ರಾಮದ ಶ್ರೀ ಶಾಂಭವಿ ಬೃಹನ್ಮಠದಲ್ಲಿ ಕಳೆದ 11 ದಿನಗಳಿಂದ ನಡೆಯುತ್ತಿದ್ದ ದಸರಾ ಮಹೋತ್ಸವವು ಡಾ. ಪಂಚಾಕ್ಷರಿ ಶಿವಾಚಾರ್ಯರ ಭವ್ಯ ಸಾರೋಟ ಮೆರವಣಿಗೆ ಹಾಗೂ ಶ್ರೀ ಶಾಂಭವಿ ದೇವಿಯ ವಿಶೇಷ ಪೂಜೆಯೊಂದಿಗೆ ಸಂಭ್ರಮದಿಂದ ಸಂಪನ್ನಗೊಂಡಿತು.

ನಾಡಹಬ್ಬ ದಸರಾ ಪ್ರಯುಕ್ತ ಶ್ರೀಮಠದಲ್ಲಿ 11 ದಿನಗಳ ಕಾಲ ಶ್ರೀ ಶಾಂಭವಿ ದೇವಿಗೆ ವಿಶೇಷ ಪೂಜೆ, ಹೋಮ, ಹವನ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಶ್ರದ್ಧಾಭಕ್ತಿಯಿಂದ ನೆರವೇರಿಸಲಾಯಿತು.

ದಸರಾ ಹಬ್ಬದ ಮರುದಿನವಾದ ಗುರುವಾರ ನೀಲೋಗಲ್ ಗ್ರಾಮದ ಹಳೆಯ ಮಠದಿಂದ ಗ್ರಾಮದ ಹೊರವಲಯದಲ್ಲಿರುವ ನೂತನ ಮಠದವರೆಗೆ ಡಾ. ಪಂಚಾಕ್ಷರಿ ಶಿವಾಚಾರ್ಯರನ್ನು ಅಲಂಕೃತ ಸಾರೋಟದಲ್ಲಿ ಮೆರವಣಿಗೆ ಮೂಲಕ ಕರೆತರಲಾಯಿತು.

ಮೆರವಣಿಗೆಯಲ್ಲಿ ಭಕ್ತರು ಕುಂಭ, ಕಳಸಗಳನ್ನು ಹೊತ್ತು ಸಾಗಿದರು. ಮಂಗಳವಾದ್ಯಗಳ ನಾದ, ನಂದಿಕೋಲು ಕುಣಿತ ಹಾಗೂ ಸಾಂಪ್ರದಾಯಿಕ ಒಡಪು ಹಾಡುಗಳೊಂದಿಗೆ ನಡೆದ ಮೆರವಣಿಗೆ ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಿಸಿತು.

ಮೆರವಣಿಗೆ ನೂತನ ಮಠ ತಲುಪಿದ ಬಳಿಕ ಶ್ರೀ ಶಾಂಭವಿ ದೇವಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಇದರೊಂದಿಗೆ 11 ದಿನಗಳ ದಸರಾ ಮಹೋತ್ಸವಕ್ಕೆ ವಿಧ್ಯುಕ್ತವಾಗಿ ತೆರೆ ಎಳೆಯಲಾಯಿತು. ಇದೇ ಸಂದರ್ಭದಲ್ಲಿ ಭಕ್ತರಿಗೆ ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿತ್ತು.

ಕಾರ್ಯಕ್ರಮದಲ್ಲಿ ಕಿರಿಯ ಶ್ರೀಗಳಾದ ಬಾಲಯೋಗಿ ರೇಣುಕ ಶಾಂತಮಲ್ಲ ಶಿವಾಚಾರ್ಯರು, ಶ್ರೀಮಠದ ಕಾರ್ಯದರ್ಶಿ ಶಾಂತಕುಮಾರ ಮಠದ ಸೇರಿದಂತೆ ಭಕ್ತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.



# ರಾಷ್ಟ್ರಮಟ್ಟದ ಕಬಡ್ಡಿ ಪಂದ್ಯಾವಳಿ: ಬೆಂಗಳೂರಿನ ಕೇಶವ ತಂಡಕ್ಕೆ ಪ್ರಥಮ ಸ್ಥಾನ



ರಾಯಚೂರು: ನಾಡಹಬ್ಬ ದಸರಾ ಪ್ರಯುಕ್ತ ತಾಲೂಕಿನ ಸಿದ್ರಾಂಪೂರು ಗ್ರಾಮದಲ್ಲಿ ಸನ್ನಿ ಮಹಾರಾಜ್ ಯೂಥ್ ಫೋರ್ಸ್ ವತಿಯಿಂದ ಆಯೋಜಿಸಿದ್ದ ಮೂರನೇ ವರ್ಷದ ರಾಷ್ಟ್ರಮಟ್ಟದ ಕಬಡ್ಡಿ ಪಂದ್ಯಾವಳಿಯಲ್ಲಿ ಬೆಂಗಳೂರಿನ ಕೇಶವ ತಂಡ ಚಾಂಪಿಯನ್ ಆಗಿ ಹೊರಹೊಮ್ಮಿತು. ಫೈನಲ್ ಪಂದ್ಯದಲ್ಲಿ ಸೈದಾಪೂರು ತಂಡದ ವಿರುದ್ಧ ರೋಚಕ ಗೆಲುವು ಸಾಧಿಸಿದ ಬೆಂಗಳೂರು ತಂಡ ಪ್ರಥಮ ಸ್ಥಾನ ಪಡೆದುಕೊಂಡರೆ, ಸೈದಾಪೂರು ತಂಡ ದ್ವಿತೀಯ ಸ್ಥಾನಕ್ಕೆ ತೃಪ್ತಿಪಟ್ಟುಕೊಂಡಿತು.

ದಸರಾ ಹಬ್ಬದ ಅಂಗವಾಗಿ ಆಯೋಜಿಸಲಾಗಿದ್ದ ಈ ಕ್ರೀಡಾಕೂಟದಲ್ಲಿ ವಿವಿಧ ಭಾಗಗಳಿಂದ ಆಗಮಿಸಿದ್ದ ಕಬಡ್ಡಿ ತಂಡಗಳು ಭಾಗವಹಿಸಿ ತಮ್ಮ ಕ್ರೀಡಾ ಸಾಮರ್ಥ್ಯ ಪ್ರದರ್ಶಿಸಿದವು. ವಿಶೇಷವಾಗಿ ಅಂತಿಮ ಪಂದ್ಯದಲ್ಲಿ ಬೆಂಗಳೂರು ಹಾಗೂ ಸೈದಾಪೂರು ತಂಡಗಳ ನಡುವಿನ ಪೈಪೋಟಿ ಕ್ರೀಡಾಭಿಮಾನಿಗಳ ಗಮನ ಸೆಳೆಯಿತು.

ಪಂದ್ಯಾವಳಿಯ ಸಮಾರೋಪ ಸಮಾರಂಭದಲ್ಲಿ ಕ್ರೀಡಾಕೂಟದ ಪ್ರಾಯೋಜಕ ಹಾಗೂ ಯುವ ಮುಖಂಡ ಸನ್ನಿ ಮಹಾರಾಜ್ ಅವರು ವಿಜೇತ ತಂಡಗಳಿಗೆ ಟ್ರೋಫಿ ಹಾಗೂ ನಗದು ಬಹುಮಾನ ವಿತರಿಸಿದರು.

ಪ್ರಥಮ ಸ್ಥಾನ ಪಡೆದ ಬೆಂಗಳೂರಿನ ಕೇಶವ ತಂಡಕ್ಕೆ ₹60 ಸಾವಿರ ನಗದು ಬಹುಮಾನ ಹಾಗೂ ಟ್ರೋಫಿ, ದ್ವಿತೀಯ ಸ್ಥಾನ ಪಡೆದ ಸೈದಾಪೂರು ತಂಡಕ್ಕೆ ₹40 ಸಾವಿರ ಹಾಗೂ ಟ್ರೋಫಿ ನೀಡಲಾಯಿತು. ತೃತೀಯ ಸ್ಥಾನ ಗಳಿಸಿದ ಮಾನ್ವಿ ತಂಡಕ್ಕೆ ₹20 ಸಾವಿರ ಹಾಗೂ ನಾಲ್ಕನೇ ಸ್ಥಾನ ಪಡೆದ ತಂಡಕ್ಕೆ ₹10 ಸಾವಿರ ನಗದು ಬಹುಮಾನ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸನ್ನಿ ಮಹಾರಾಜ್, ಗ್ರಾಮೀಣ ಭಾಗದ ಯುವಕರಲ್ಲಿ ಅಪಾರ ಕ್ರೀಡಾ ಪ್ರತಿಭೆಯಿದ್ದು, ಅವರಿಗೆ ಸೂಕ್ತ ವೇದಿಕೆ ಹಾಗೂ ಪ್ರೋತ್ಸಾಹ ದೊರೆತರೆ ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡಲು ಸಾಧ್ಯವಿದೆ. ಇಂತಹ ಕ್ರೀಡಾಕೂಟಗಳ ಮೂಲಕ ಜಿಲ್ಲೆಯ ಪ್ರತಿಭಾವಂತ ಕ್ರೀಡಾಪಟುಗಳನ್ನು ಗುರುತಿಸಿ ಬೆಳೆಸುವುದು ನಮ್ಮ ಉದ್ದೇಶವಾಗಿದೆ ಎಂದರು.

ಕಬಡ್ಡಿಯಂತಹ ಗ್ರಾಮೀಣ ಕ್ರೀಡೆಗಳನ್ನು ಉಳಿಸಿ ಬೆಳೆಸುವುದರ ಜೊತೆಗೆ ಯುವಕರಲ್ಲಿ ಕ್ರೀಡಾಸ್ಫೂರ್ತಿ, ಶಿಸ್ತು ಹಾಗೂ ಒಗ್ಗಟ್ಟಿನ ಮನೋಭಾವ ಮೂಡಿಸುವುದು ಅಗತ್ಯವಾಗಿದೆ. ಜಿಲ್ಲೆಯ ಕ್ರೀಡಾಪಟುಗಳು ಉನ್ನತ ಮಟ್ಟದಲ್ಲಿ ಸಾಧನೆ ಮಾಡಲು ಅಗತ್ಯ ಪ್ರೋತ್ಸಾಹ ನೀಡುವ ಕಾರ್ಯ ಮುಂದುವರಿಯಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನಗರದ ವಿವಿಧ ಮುಖಂಡರು, ಕ್ರೀಡಾಪಟುಗಳು ಹಾಗೂ ಕ್ರೀಡಾಭಿಮಾನಿಗಳು ಉಪಸ್ಥಿತರಿದ್ದರು.

# ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡಿ: ವಿವಿಧ ಬೇಡಿಕೆಗಳ ಈಡೇರಿಕೆಗೆ ನವಯಾನ ಬೌದ್ಧ ಸಂಘ ಆಗ್ರಹ



ರಾಯಚೂರು: ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಅಗತ್ಯವಿರುವ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದರ ಜೊತೆಗೆ ಮೂಲಸೌಕರ್ಯಗಳ ವಿಸ್ತರಣೆ, ವಿಮಾನ ನಿಲ್ದಾಣ ಸ್ಥಾಪನೆ, ಶಿಕ್ಷಣ ಮತ್ತು ಕೃಷಿ ಕ್ಷೇತ್ರಗಳ ಅಭಿವೃದ್ಧಿ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ನವಯಾನ ಬೌದ್ಧ ಸಂಘದ ಪದಾಧಿಕಾರಿಗಳು ಸರ್ಕಾರವನ್ನು ಒತ್ತಾಯಿಸಿದ್ದಾರೆ.

ನಗರದ ನೌಕರರ ಭವನದಲ್ಲಿ ನಡೆದ ಸಭೆಯಲ್ಲಿ ಜಿಲ್ಲೆಯ ಅಭಿವೃದ್ಧಿಗೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ಚರ್ಚೆ ನಡೆಸಿದ ಸಂಘದ ಪದಾಧಿಕಾರಿಗಳು, ರಾಯಚೂರು ಜಿಲ್ಲೆಯ ಜನಸಾಮಾನ್ಯರಿಗೆ ಅಗತ್ಯವಿರುವ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ವಿಶೇಷ ಗಮನಹರಿಸಬೇಕು ಎಂದು ಆಗ್ರಹಿಸಿದರು.

ಜಿಲ್ಲೆಯಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕಾದ ಅಗತ್ಯವಿದೆ. ಸಾರ್ವಜನಿಕರ ದಿನನಿತ್ಯದ ಜೀವನಕ್ಕೆ ಸಂಬಂಧಿಸಿದ ಮೂಲಸೌಕರ್ಯಗಳನ್ನು ಬಲಪಡಿಸುವುದರ ಜೊತೆಗೆ ಶಿಕ್ಷಣ, ಕೃಷಿ ಹಾಗೂ ಸಾರಿಗೆ ಕ್ಷೇತ್ರಗಳಲ್ಲಿ ಸುಧಾರಣೆ ತರಲು ಸರ್ಕಾರ ಕ್ರಮ ಕೈಗೊಳ್ಳಬೇಕು. ಜಿಲ್ಲೆಯ ಪ್ರಗತಿಗೆ ಪೂರಕವಾಗಿರುವ ಯೋಜನೆಗಳನ್ನು ಗುರುತಿಸಿ ಅವುಗಳ ಅನುಷ್ಠಾನಕ್ಕೆ ಅಗತ್ಯ ಅನುದಾನ ಮತ್ತು ಆಡಳಿತಾತ್ಮಕ ಬೆಂಬಲ ಒದಗಿಸಬೇಕು ಎಂದು ಮನವಿ ಮಾಡಿದರು.

ವಿಶೇಷವಾಗಿ ರಾಯಚೂರಿನಲ್ಲಿ ವಿಮಾನ ನಿಲ್ದಾಣ ಸ್ಥಾಪನೆಯ ಬೇಡಿಕೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ವಿಮಾನ ಸಂಪರ್ಕ ಸೌಲಭ್ಯ ದೊರೆತರೆ ಜಿಲ್ಲೆಯ ಸಾರಿಗೆ ವ್ಯವಸ್ಥೆ ಸುಧಾರಿಸುವುದರ ಜೊತೆಗೆ ಕೈಗಾರಿಕೆ, ವ್ಯಾಪಾರ, ಉದ್ಯೋಗ ಹಾಗೂ ಪ್ರವಾಸೋದ್ಯಮ ಕ್ಷೇತ್ರಗಳ ಬೆಳವಣಿಗೆಗೂ ಅನುಕೂಲವಾಗಲಿದೆ. ಈ ಹಿನ್ನೆಲೆಯಲ್ಲಿ ವಿಮಾನ ನಿಲ್ದಾಣ ಯೋಜನೆಗೆ ಸಂಬಂಧಿಸಿದ ಪ್ರಕ್ರಿಯೆಗಳನ್ನು ಚುರುಕುಗೊಳಿಸಬೇಕು ಎಂದು ಒತ್ತಾಯಿಸಿದರು.

ಅದೇ ರೀತಿ ಜಿಲ್ಲೆಯ ಶಿಕ್ಷಣ ಕ್ಷೇತ್ರವನ್ನು ಬಲಪಡಿಸುವ ನಿಟ್ಟಿನಲ್ಲಿ ಅಗತ್ಯ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸಬೇಕು. ಗ್ರಾಮೀಣ ಹಾಗೂ ನಗರ ಪ್ರದೇಶಗಳ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ದೊರೆಯುವಂತೆ ಕ್ರಮ ಕೈಗೊಳ್ಳಬೇಕು. ಶೈಕ್ಷಣಿಕ ಸೌಲಭ್ಯಗಳ ವಿಸ್ತರಣೆಯೊಂದಿಗೆ ಯುವಜನತೆಗೆ ಉತ್ತಮ ಅವಕಾಶಗಳನ್ನು ಕಲ್ಪಿಸುವುದು ಜಿಲ್ಲೆಯ ಭವಿಷ್ಯದ ದೃಷ್ಟಿಯಿಂದ ಮಹತ್ವದ್ದಾಗಿದೆ ಎಂದು ಅಭಿಪ್ರಾಯಪಟ್ಟರು.

ಕೃಷಿ ಪ್ರಧಾನ ಜಿಲ್ಲೆಯಾಗಿರುವ ರಾಯಚೂರಿನಲ್ಲಿ ರೈತರ ಸಮಸ್ಯೆಗಳಿಗೆ ಸ್ಪಂದಿಸುವುದು ಅತ್ಯಂತ ಅಗತ್ಯವಾಗಿದೆ. ಕೃಷಿ ಚಟುವಟಿಕೆಗಳಿಗೆ ಪೂರಕವಾದ ಸೌಲಭ್ಯಗಳನ್ನು ವಿಸ್ತರಿಸುವುದು, ರೈತರಿಗೆ ಅಗತ್ಯ ನೆರವು ಒದಗಿಸುವುದು ಹಾಗೂ ಕೃಷಿ ಕ್ಷೇತ್ರದ ಅಭಿವೃದ್ಧಿಗೆ ಸಂಬಂಧಿಸಿದ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವತ್ತ ಸಂಬಂಧಪಟ್ಟ ಇಲಾಖೆಗಳು ಗಮನಹರಿಸಬೇಕು ಎಂದು ಆಗ್ರಹಿಸಿದರು.

ಜಿಲ್ಲೆಯ ಸಮಗ್ರ ಪ್ರಗತಿ ಕೇವಲ ಕೆಲವು ಪ್ರದೇಶಗಳಿಗೆ ಸೀಮಿತವಾಗದೆ ಗ್ರಾಮೀಣ ಭಾಗಗಳಿಗೂ ತಲುಪಬೇಕು. ಅಭಿವೃದ್ಧಿ ಯೋಜನೆಗಳ ಪ್ರಯೋಜನ ಸಮಾಜದ ಎಲ್ಲ ವರ್ಗಗಳ ಜನರಿಗೆ ದೊರೆಯುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು. ಸಾರ್ವಜನಿಕರ ಅಗತ್ಯತೆಗಳಿಗೆ ಅನುಗುಣವಾಗಿ ಅಭಿವೃದ್ಧಿ ಕಾರ್ಯಗಳನ್ನು ರೂಪಿಸಿ ಅನುಷ್ಠಾನಗೊಳಿಸಬೇಕು ಎಂದು ಸಂಘದ ಪದಾಧಿಕಾರಿಗಳು ಮನವಿ ಮಾಡಿದರು.

ಜಿಲ್ಲೆಯ ಅಭಿವೃದ್ಧಿಗೆ ಸಂಬಂಧಿಸಿದಂತೆ ಸಲ್ಲಿಸಿರುವ ಬೇಡಿಕೆಗಳನ್ನು ಸರ್ಕಾರ ಹಾಗೂ ಸಂಬಂಧಪಟ್ಟ ಇಲಾಖೆಗಳು ಗಂಭೀರವಾಗಿ ಪರಿಗಣಿಸಬೇಕು. ಜನರ ಬಹುದಿನಗಳ ನಿರೀಕ್ಷೆಗಳನ್ನು ಈಡೇರಿಸಲು ಸೂಕ್ತ ಪರಿಶೀಲನೆ ನಡೆಸಿ, ಆದ್ಯತೆಯ ಮೇರೆಗೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ರಾಯಚೂರು ಜಿಲ್ಲೆಯ ಸಮಗ್ರ ಅಭಿವೃದ್ಧಿ ಹಾಗೂ ಜನಸಾಮಾನ್ಯರ ಹಿತದೃಷ್ಟಿಯಿಂದ ಸರ್ಕಾರ ಸಕಾರಾತ್ಮಕವಾಗಿ ಸ್ಪಂದಿಸಿ, ಅಗತ್ಯ ಯೋಜನೆಗಳನ್ನು ಕಾರ್ಯರೂಪಕ್ಕೆ ತರಬೇಕು ಎಂದು ನವಯಾನ ಬೌದ್ಧ ಸಂಘದ ಪದಾಧಿಕಾರಿಗಳು ಆಗ್ರಹಿಸಿದರು.

# ರೈತರು, ಕೃಷಿ ಕೂಲಿಕಾರರ ಹಕ್ಕುಗಳಿಗಾಗಿ ಅ.24ರಿಂದ ಪಾದಯಾತ್ರೆ, 27ರಂದು ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ




ಸಿಂಧನೂರು: ಭೂಮಿ, ಮನೆ, ನಿವೇಶನ, ಉದ್ಯೋಗ ಖಾತ್ರಿ, ಕುಡಿಯುವ ನೀರು, ಬರ ಪರಿಹಾರ ಹಾಗೂ ವಿದ್ಯುತ್ ಸಮಸ್ಯೆ ಸೇರಿದಂತೆ ರೈತರು ಮತ್ತು ಕೃಷಿ ಕೂಲಿಕಾರರ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಅಕ್ಟೋಬರ್ 24ರಿಂದ ಜಿಲ್ಲೆಯ ವಿವಿಧ ತಾಲೂಕುಗಳ ಮೂಲಕ ಪಾದಯಾತ್ರೆ ನಡೆಸಿ, ಅಕ್ಟೋಬರ್ 27ರಂದು ರಾಯಚೂರು ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ಹಮ್ಮಿಕೊಳ್ಳಲಾಗಿದೆ ಎಂದು ಬಸವಂತರಾಯಗೌಡ ಕಲ್ಲೂರು ತಿಳಿಸಿದರು.

ಗುರುವಾರ ನಗರದ ಪತ್ರಿಕಾ ಭವನದಲ್ಲಿ ಕರ್ನಾಟಕ ಪ್ರಾಂತ ರೈತ ಸಂಘ ಹಾಗೂ ಕರ್ನಾಟಕ ಪ್ರಾಂತ ಕೃಷಿ ಕೂಲಿಕಾರರ ಮತ್ತು ಗ್ರಾಮೀಣ ಕಾರ್ಮಿಕರ ಸಂಘದ ವತಿಯಿಂದ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಜಿಲ್ಲೆಯ ರೈತರು, ಕೃಷಿ ಕೂಲಿಕಾರರು ಹಾಗೂ ಗ್ರಾಮೀಣ ಕಾರ್ಮಿಕರು ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದು, ಅವರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರದ ಗಮನ ಸೆಳೆಯಲು ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ. ರೈತರು ಹಾಗೂ ಕೂಲಿಕಾರರ ಬದುಕಿಗೆ ಸಂಬಂಧಿಸಿದ ಮೂಲಭೂತ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕೆಂದು ಒತ್ತಾಯಿಸಿದರು.

ಅಕ್ಟೋಬರ್ 24ರಂದು ಸಿಂಧನೂರಿನಿಂದ ಆರಂಭವಾಗುವ ಪಾದಯಾತ್ರೆಯು ಉದ್ಬಾಳ, ಗೋಮರ್ಸಿ, ಮಾಡಶಿರವಾರ, ಬೆಳಗುರ್ಕಿ, ಅಲಬನೂರು, ಬಾದರ್ಲಿ, ಹರೇಟನೂರು, ಗಿಣಿವಾರ, ಒಳಬಳ್ಳಾರಿ, ಹೆಡಗಿನಾಳ, ಪುಲಮೇಶ್ವರದಿನ್ನಿ, ಚಿತ್ರಾಲಿ, ಚಿಂತಮಾನದೊಡ್ಡಿ, ಆಯನೂರು, ಹುಲಗುಂಚಿ, ಗೊನ್ವಾರ, ಪುಲದಿನ್ನಿ, ರಾಗಲಪರ್ವಿ, ವಲ್ಕಂದಿನ್ನಿ, ಯಾಪಲಪರ್ವಿ ಹಾಗೂ ಪೊತ್ನಾಳ ಮಾರ್ಗವಾಗಿ ಏಳು ಮೈಲ್ ಕ್ರಾಸ್ ತಲುಪಲಿದೆ ಎಂದು ವಿವರಿಸಿದರು.

ಗ್ರಾಮೀಣ ಪ್ರದೇಶದ ಭೂರಹಿತರಿಗೆ ಭೂಮಿ, ವಸತಿರಹಿತರಿಗೆ ಮನೆ ಹಾಗೂ ನಿವೇಶನ ಒದಗಿಸಬೇಕು. ಉದ್ಯೋಗ ಖಾತ್ರಿ ಯೋಜನೆಯಡಿ ಸಮರ್ಪಕವಾಗಿ ಕೆಲಸ ನೀಡಬೇಕು. ಕುಡಿಯುವ ನೀರು ಮತ್ತು ವಿದ್ಯುತ್ ಸಮಸ್ಯೆಗಳನ್ನು ಪರಿಹರಿಸುವುದರ ಜೊತೆಗೆ ಬರದಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ಅಕ್ಟೋಬರ್ 27ರಂದು ಜಿಲ್ಲಾಧಿಕಾರಿ ಕಚೇರಿ ಎದುರು ನಡೆಯಲಿರುವ ಧರಣಿಯಲ್ಲಿ ಜಿಲ್ಲೆಯ ವಿವಿಧ ತಾಲೂಕುಗಳ ರೈತರು, ಕೃಷಿ ಕೂಲಿಕಾರರು, ಗ್ರಾಮೀಣ ಕಾರ್ಮಿಕರು ಹಾಗೂ ಸಂಘಟನೆಗಳ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಹೋರಾಟವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಶರಣಪ್ಪ ಚಿರತನಾಳ, ಶಂಕ್ರಪ್ಪ ಕೆಂಗಲ್, ಆದನಗೌಡ ಹಾಗೂ ಹುಸೇನಪ್ಪ ದಡೆಸ್ಗೂರು ಉಪಸ್ಥಿತರಿದ್ದರು.

# ದೇವದುರ್ಗದಲ್ಲಿ ಸಾಂಪ್ರದಾಯಿಕ ವೈಭವದೊಂದಿಗೆ ನಾಡದಸರಾ ಉತ್ಸವ ಸಂಪನ್ನ



ದೇವದುರ್ಗ, ಅ.21: ಪಟ್ಟಣದಲ್ಲಿ ಕಳೆದ ಹತ್ತು ದಿನಗಳಿಂದ ಭಕ್ತಿ, ಶ್ರದ್ಧೆ ಹಾಗೂ ಸಂಭ್ರಮದಿಂದ ನಡೆಯುತ್ತಿದ್ದ ನವರಾತ್ರಿ ಮತ್ತು ನಾಡದಸರಾ ಮಹೋತ್ಸವವು ಬುಧವಾರ ಸಾಂಪ್ರದಾಯಿಕ ಧಾರ್ಮಿಕ ವಿಧಿವಿಧಾನಗಳು, ಪಲ್ಲಕ್ಕಿ ಮೆರವಣಿಗೆ ಹಾಗೂ ಬನ್ನಿ ಪೂಜೆಯೊಂದಿಗೆ ಅದ್ಧೂರಿಯಾಗಿ ಸಂಪನ್ನಗೊಂಡಿತು.

ಪ್ರತಿವರ್ಷದ ಸಂಪ್ರದಾಯದಂತೆ ಪಟ್ಟಣದ ಐತಿಹಾಸಿಕ ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಹಾಗೂ ಧಾರ್ಮಿಕ ಕೈಂಕರ್ಯಗಳನ್ನು ನೆರವೇರಿಸಲಾಯಿತು. ಬಳಿಕ ದೇವರ ಪಲ್ಲಕ್ಕಿ ಮೆರವಣಿಗೆಗೆ ಚಾಲನೆ ನೀಡಲಾಯಿತು. ಮೆರವಣಿಗೆಯು ದರ್ಬಾರ್ ಕೋಟೆ ರಸ್ತೆ, ಚೌಡಿಕಟ್ಟಿ, ಗಾಂಧಿ ಚೌಕ್, ಬಸವೇಶ್ವರ ವೃತ್ತ ಸೇರಿದಂತೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು.

ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಸಾಗಿದ ಪಲ್ಲಕ್ಕಿ ಮೆರವಣಿಗೆಯಲ್ಲಿ ಭಕ್ತರು ಹಾಗೂ ಸಾರ್ವಜನಿಕರು ಪಾಲ್ಗೊಂಡು ದಸರಾ ಸಂಭ್ರಮಕ್ಕೆ ಸಾಕ್ಷಿಯಾದರು. ಸಾಂಪ್ರದಾಯಿಕ ಆಚರಣೆಗಳೊಂದಿಗೆ ನಡೆದ ಮೆರವಣಿಗೆಯು ಪಟ್ಟಣದಲ್ಲಿ ಹಬ್ಬದ ವಾತಾವರಣ ನಿರ್ಮಿಸಿತು.

ಬಳಿಕ ಮೆರವಣಿಗೆ ಬನ್ನಿಮಂಟಪಕ್ಕೆ ತಲುಪಿದಾಗ ಪೊಲೀಸ್ ಠಾಣೆಯಿಂದ ತರಲಾಗಿದ್ದ ಪಟ್ಟದ ಕತ್ತಿ ಹಾಗೂ ಬನ್ನಿಮರಕ್ಕೆ ಸಂಪ್ರದಾಯದಂತೆ ವಿಶೇಷ ಪೂಜೆ ಸಲ್ಲಿಸಲಾಯಿತು. ಧಾರ್ಮಿಕ ವಿಧಿವಿಧಾನಗಳು ಪೂರ್ಣಗೊಂಡ ನಂತರ ರಾಜಮನೆತನದ ವಂಶಸ್ಥರು, ಗಣ್ಯರು ಹಾಗೂ ಸಾರ್ವಜನಿಕರು ಪರಸ್ಪರ ಬನ್ನಿ ಪತ್ರಿ ವಿನಿಮಯ ಮಾಡಿಕೊಂಡು ವಿಜಯದಶಮಿ ಶುಭಾಶಯಗಳನ್ನು ಕೋರಿದರು.

ಹಿರಿಯರ ಆಶೀರ್ವಾದ ಪಡೆದು, ಬಂಧುಮಿತ್ರರು ಹಾಗೂ ಆತ್ಮೀಯರಿಗೆ ಬನ್ನಿ ನೀಡುವ ಮೂಲಕ ಪರಸ್ಪರ ಪ್ರೀತಿ, ವಿಶ್ವಾಸ ಮತ್ತು ಸೌಹಾರ್ದತೆಯ ಸಂದೇಶ ಸಾರಲಾಯಿತು. ವಿಜಯದಶಮಿ ಹಬ್ಬದ ಅಂಗವಾಗಿ ಪಟ್ಟಣದ ಜನರು ಸಾಂಪ್ರದಾಯಿಕ ಆಚರಣೆಗಳಲ್ಲಿ ಉತ್ಸಾಹದಿಂದ ಭಾಗವಹಿಸಿದರು.

ಈ ಸಂದರ್ಭದಲ್ಲಿ ದೇವದುರ್ಗ ಸಂಸ್ಥಾನದ ರಾಜಮನೆತನದ ಯುವರಾಜ ರಾಜ ವೆಂಕಟೇಶ ನಾಯಕ, ದೊರೆ ತಿರುಮಲಾಚಾರ್ಯ, ಭೀಮಾಚಾರ್ಯ, ರಾಜ ಜೋಶಿ ಶೆಟ್ಟಿ, ಶಿವನಗೌಡ, ಶಿವನಗೌಡ ಕುಪ್ಪಿ ಮೇಟಿ, ಶೆಟ್ಟಿ ವೆಂಕನಗೌಡ, ಶೆಟ್ಟಿ ಸುಹಾಸ್, ವಿನಯಕುಮಾರ್, ಪೊಲೀಸ್ ಪಾಟೀಲ್ ಬಸವರಾಜ್, ಪಡಿಶೆಟ್ಟಿ, ಡಾ. ಬಸವರಾಜ್, ಗೋಪಾಲ್ ಸಮೇದ ಪೂಜಾರಿ, ಲಕ್ಷ್ಮಯ್ಯ, ಮಲ್ಲಯ್ಯ, ಡಾ. ಮಲ್ಲಯ್ಯ ನಾಯಕ, ಸುರೇಶ್ ಅಮರಾಪುರ, ಬೂದೆಪ್ಪ ಬಳೆ, ಚೆನ್ನಯ್ಯ ಸ್ವಾಮಿ, ಶಿವರಾಜ್ ಪೂಜಾರಿ ಹಾಗೂ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಚ್. ಶಿವರಾಜ್ ಉಪಸ್ಥಿತರಿದ್ದರು.

ಇವರೊಂದಿಗೆ ಐತಿಹಾಸಿಕ ದೇವದುರ್ಗ ಸಂಸ್ಥಾನದ ವಂಶಸ್ಥರು, ವತನದಾರರು, ಮುಜರಾಯಿದಾರರು, ದೇಸಾಯಿಗಳು, ಪೊಲೀಸ್ ಪಾಟೀಲರು, ಪಟ್ಟಣದ ಗಣ್ಯರು, ಸುಮಂಗಲಿಯರು, ಯುವಕರು ಹಾಗೂ ಸಾರ್ವಜನಿಕರು ಭಾಗವಹಿಸಿ ನಾಡದಸರಾ ಮಹೋತ್ಸವವನ್ನು ಸಂಭ್ರಮದಿಂದ ಆಚರಿಸಿದರು.

# ಮುನ್ನೂರು ಕಾಪು ಸಮಾಜದಿಂದ ಬನ್ನಿ ಪೂಜೆ, ರಥೋತ್ಸವದೊಂದಿಗೆ ದಸರಾ ಹಬ್ಬ ಆಚರಣೆ



ರಾಯಚೂರು: ವಿಜಯದಶಮಿ ಹಬ್ಬದ ಅಂಗವಾಗಿ ನಗರದ ಗಡ್ವಾಲ್ ರಸ್ತೆಯಲ್ಲಿರುವ ಶ್ರೀ ಮಾತಾ ಲಕ್ಷ್ಮೀ ದೇವಿ ಹಾಗೂ ಕಾಳಿಕಾ ದೇವಿ ದೇವಸ್ಥಾನಗಳಲ್ಲಿ ಮುನ್ನೂರು ಕಾಪು ಸಮಾಜದ ವತಿಯಿಂದ ಬನ್ನಿ ಪೂಜೆ ಹಾಗೂ ರಥೋತ್ಸವವನ್ನು ಭಕ್ತಿ, ಶ್ರದ್ಧೆಯಿಂದ ನೆರವೇರಿಸಲಾಯಿತು.

ದಸರಾ ಹಬ್ಬದ ಪ್ರಯುಕ್ತ ದೇವಸ್ಥಾನಗಳಲ್ಲಿ ವಿಶೇಷ ಪೂಜಾ ಕೈಂಕರ್ಯಗಳನ್ನು ಹಮ್ಮಿಕೊಳ್ಳಲಾಗಿತ್ತು. ಸಮಾಜದ ಹಿರಿಯರು, ಮುಖಂಡರು ಹಾಗೂ ಯುವಕರು ಒಗ್ಗೂಡಿ ಬನ್ನಿ ಗಿಡಕ್ಕೆ ಪೂಜೆ ಸಲ್ಲಿಸಿದರು. ಬಳಿಕ ದೇವಿಯ ರಥವನ್ನು ಎಳೆಯುವ ಮೂಲಕ ವಿಜಯದಶಮಿ ಹಬ್ಬವನ್ನು ಸಂಭ್ರಮದಿಂದ ಆಚರಿಸಿದರು.

ಪೂಜಾ ಕಾರ್ಯಕ್ರಮದ ನಂತರ ಸಮಾಜದ ಹಿರಿಯರಿಗೆ ಬನ್ನಿ ನೀಡಿ ಗೌರವ ಸಲ್ಲಿಸಲಾಯಿತು. ಸಮಾಜದ ಮುಖಂಡರು ಹಾಗೂ ಸದಸ್ಯರು ಪರಸ್ಪರ ಬನ್ನಿ ವಿನಿಮಯ ಮಾಡಿಕೊಂಡು ದಸರಾ ಹಬ್ಬದ ಶುಭಾಶಯಗಳನ್ನು ಕೋರಿದರು. ಈ ಸಂದರ್ಭದಲ್ಲಿ ಸಮಾಜದ ಹಿರಿಯರು ಮತ್ತು ಯುವಕರು ಒಂದೆಡೆ ಸೇರಿ ಹಬ್ಬದ ಸಂಭ್ರಮವನ್ನು ಹಂಚಿಕೊಂಡರು.

ಸಾಂಪ್ರದಾಯಿಕವಾಗಿ ಆಚರಿಸಿಕೊಂಡು ಬರುತ್ತಿರುವ ಬನ್ನಿ ಪೂಜೆ ಹಾಗೂ ವಿಜಯದಶಮಿ ಹಬ್ಬದ ಆಚರಣೆಯಲ್ಲಿ ಸಮಾಜದ ವಿವಿಧ ವಯೋಮಾನದವರು ಭಾಗವಹಿಸಿದ್ದು ವಿಶೇಷವಾಗಿತ್ತು. ದೇವಸ್ಥಾನದ ಆವರಣದಲ್ಲಿ ನಡೆದ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಕ್ತರು ಪಾಲ್ಗೊಂಡು ದೇವಿಯ ದರ್ಶನ ಪಡೆದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಎ. ಪಾಪಾರೆಡ್ಡಿ, ವಿ. ಕೃಷ್ಣಮೂರ್ತಿ, ಜಿ. ಶೇಖರ ರೆಡ್ಡಿ, ಕುಕ್ಕಲ್ ನರಸಿಂಹಲು, ಬಂಗಿ ನರಸಾರೆಡ್ಡಿ, ಎಸ್. ತಿಮ್ಮರೆಡ್ಡಿ ಹಟ್ಟಿ, ಕೆ. ರಾಜೇಂದ್ರ ರೆಡ್ಡಿ, ಜಿ. ಪ್ರತಾಪ್ ರೆಡ್ಡಿ, ಜಿ. ನರಸಾರೆಡ್ಡಿ, ಬಿ. ಶೇಖರ್ ರೆಡ್ಡಿ, ಎಸ್. ಜನಾರ್ಧನ್ ರೆಡ್ಡಿ, ಪುಂಡ್ಲಾ ರಾಜೇಂದ್ರ ರೆಡ್ಡಿ, ವಿಜಯ್ ಭಾಸ್ಕರ್ ರೆಡ್ಡಿ, ಮಹಾನಂದ ರೆಡ್ಡಿ, ಜಿ.ಟಿ. ರೆಡ್ಡಿ, ಕೆ. ರವೀಂದ್ರ ರೆಡ್ಡಿ, ಜಿ. ಭೀಮ ರೆಡ್ಡಿ, ಅಂಬಮೇಶ್, ನಾಗರಾಜ್, ಗಣೇಶ್ ರೆಡ್ಡಿ, ಎಸ್. ಸಂಜು ರೆಡ್ಡಿ ಸೇರಿದಂತೆ ಮುನ್ನೂರು ಕಾಪು ಸಮಾಜದ ಮುಖಂಡರು, ಹಿರಿಯರು ಹಾಗೂ ಯುವಕರು ಭಾಗವಹಿಸಿದ್ದರು.

# ಕುಕನೂರು ಗ್ರಾಮದಲ್ಲಿ ಶ್ರೀ ಮಾರಿಕಾಂಬಾ ದೇವಿಯ ನೂತನ ಪಂಚಲೋಹ ಮೂರ್ತಿ ಪ್ರತಿಷ್ಠಾಪನೆ



ರಾಯಚೂರು: ತಾಲೂಕಿನ ಕುಕನೂರು ಗ್ರಾಮದಲ್ಲಿ ವಿಜಯದಶಮಿ ಹಬ್ಬದ ಅಂಗವಾಗಿ ಗ್ರಾಮದೇವತೆ ಶ್ರೀ ಮಾರಿಕಾಂಬಾ ದೇವಿಯ ನೂತನ ಪಂಚಲೋಹದ ಮೂರ್ತಿಯನ್ನು ಧಾರ್ಮಿಕ ವಿಧಿವಿಧಾನಗಳೊಂದಿಗೆ ವಿಜೃಂಭಣೆ

ಯಿಂದ ಪ್ರತಿಷ್ಠಾಪಿಸಲಾಯಿತು.

ಸುಮಾರು 21 ಕೆಜಿ ತೂಕದ ಸಿಂಹಾರೂಢಿಣಿ ಶ್ರೀ ಮಾರಿಕಾಂಬಾ ದೇವಿಯ ಪಂಚಲೋಹದ ಮೂರ್ತಿಯನ್ನು ಶಕ್ತಿನಗರದಿಂದ ತರಲಾಗಿದ್ದು, ಗ್ರಾಮದ ಹೊರವಲಯದಿಂದ ಭವ್ಯ ಮೆರವಣಿಗೆಯ ಮೂಲಕ ಬರಮಾಡಿಕೊಳ್ಳಲಾಯಿತು. ಡೊಳ್ಳು ಹಾಗೂ ಸಾಂಪ್ರದಾಯಿಕ ವಾದ್ಯಮೇಳಗಳೊಂದಿಗೆ ನೂರಾರು ಮುತ್ತೈದೆಯರು ಪೂರ್ಣಕುಂಭ ಕಳಸಗಳನ್ನು ಹೊತ್ತು ಮೆರವಣಿಗೆಯಲ್ಲಿ ಭಾಗವಹಿಸಿದರು.

ಗ್ರಾಮದ ಪ್ರಮುಖ ಬೀದಿಗಳಲ್ಲಿ ದೇವಿಯ ಮೂರ್ತಿಯನ್ನು ಮೆರವಣಿಗೆ ಮೂಲಕ ಕೊಂಡೊಯ್ದು, ಊರ ಹೊರವಲಯದಲ್ಲಿರುವ ಶ್ರೀ ಮಾರಿಕಾಂಬಾ ದೇವಸ್ಥಾನಕ್ಕೆ ತರಲಾಯಿತು. ಬಳಿಕ ದೇವಿಯ ನೂತನ ಮೂರ್ತಿಗೆ ಪಂಚಾಮೃತ ಅಭಿಷೇಕ ಸೇರಿದಂತೆ ವಿಶೇಷ ಪೂಜಾ ಕೈಂಕರ್ಯಗಳನ್ನು ನೆರವೇರಿಸಿ, ಅರ್ಚಕರ ನೇತೃತ್ವದಲ್ಲಿ ಧಾರ್ಮಿಕ ವಿಧಿವಿಧಾನಗಳೊಂದಿಗೆ ಪ್ರತಿಷ್ಠಾಪನೆ ಮಾಡಲಾಯಿತು.

ಮೂರ್ತಿ ಪ್ರತಿಷ್ಠಾಪನೆ ಅಂಗವಾಗಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಹಾಗೂ ಮಹಾಮಂಗಳಾರತಿ ನೆರವೇರಿಸಲಾಯಿತು. ಗ್ರಾಮಸ್ಥರು ಹಾಗೂ ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸಿದ್ದ ಭಕ್ತರು ದೇವಿಯ ದರ್ಶನ ಪಡೆದು ಪೂಜೆ ಸಲ್ಲಿಸಿದರು. ಬಳಿಕ ಭಕ್ತರಿಗೆ ಅನ್ನಪ್ರಸಾದ ವಿತರಿಸಲಾಯಿತು.

ವಿಜಯದಶಮಿ ಪ್ರಯುಕ್ತ ಸಂಜೆ ಗ್ರಾಮದ ಶಕ್ತಿಮಂದಿರದಿಂದ ರಾಮಲಿಂಗೇಶ್ವರ ದೇವಸ್ಥಾನದ ಸಮೀಪವಿರುವ ಶಮಿವೃಕ್ಷದವರೆಗೆ ಭಜನಾ ಮೇಳದೊಂದಿಗೆ ಮೆರವಣಿಗೆ ನಡೆಸಲಾಯಿತು. ಶಮಿವೃಕ್ಷಕ್ಕೆ ಪೂಜೆ ಸಲ್ಲಿಸಿ ಬನ್ನಿ ಮುಡಿಯುವ ಮೂಲಕ ಗ್ರಾಮಸ್ಥರು ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡು ವಿಜಯದಶಮಿ ಹಬ್ಬವನ್ನು ಸಂಭ್ರಮದಿಂದ ಆಚರಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ಮಾರಿಕಾಂಬಾ ದೇವಸ್ಥಾನದ ಅರ್ಚಕರು, ಗ್ರಾಮದ ಹಿರಿಯರು, ಮುಖಂಡರು, ಮಹಿಳೆಯರು ಹಾಗೂ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

# ಹಳ್ಳಿಹೊಸೂರಿನಲ್ಲಿ ಶ್ರೀ ಬೀರಲಿಂಗೇಶ್ವರ ಕಾರಣಿಕೆ: ಮುಂಗಾರಿಗೆ ಬಂಗಾರದ ಮಳೆ, ಸಿಂಗಾರದ ಬೆಳೆ



ಸಿರವಾರ: ತಾಲೂಕಿನ ಮಾಡಗಿರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಳ್ಳಿಹೊಸೂರು ಗ್ರಾಮದ ಶ್ರೀ ಘನಗುರು ಬೀರಲಿಂಗೇಶ್ವರ ದೇವಸ್ಥಾನದಲ್ಲಿ ದಸರಾ ಹಬ್ಬದ ಅಂಗವಾಗಿ ಸಾಂಪ್ರದಾಯಿಕ ಕಾರಣಿಕೆ (ಹೇಳಿಕೆ) ಕಾರ್ಯಕ್ರಮ ಜರುಗಿತು.

ದೇವಸ್ಥಾನದಲ್ಲಿ ನಡೆದ ಕಾರಣಿಕೆ ಸಂದರ್ಭದಲ್ಲಿ ಮುಂಗಾರಿಗೆ ಬಂಗಾರದ ಮಳೆ, ಸಿಂಗಾರದ ಬೆಳೆ, ಹಿಂಗಾರಿಗೆ ಮುತ್ತು ಒಳದಿತ್ತು, ತಂಗಿ ವಳೆ ದಂಡಿಗೆ ನಾಡಿದಳು ಎಂದು ನುಡಿಯಲಾಯಿತು.

ಪ್ರತಿವರ್ಷ ದಸರಾ ಹಾಗೂ ಯುಗಾದಿ ಹಬ್ಬಗಳ ಸಂದರ್ಭದಲ್ಲಿ ಎರಡು ಬಾರಿ ಶ್ರೀ ಬೀರಲಿಂಗೇಶ್ವರ ದೇವಸ್ಥಾನದಲ್ಲಿ ಕಾರಣಿಕೆ ನುಡಿಯುವ ಸಂಪ್ರದಾಯವಿದೆ. ಈ ಕಾರಣಿಕೆಯನ್ನು ಆಲಿಸಲು ಸ್ಥಳೀಯ ಭಕ್ತರಲ್ಲದೆ ನೆರೆಯ ಮಹಾರಾಷ್ಟ್ರ, ಆಂಧ್ರಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳಿಂದಲೂ ಭಕ್ತರು ಆಗಮಿಸುತ್ತಾರೆ.

ಕೃಷಿ ಹಾಗೂ ಮಳೆಯ ಕುರಿತು ನುಡಿಯುವ ಕಾರಣಿಕೆಗೆ ಭಕ್ತರು ವಿಶೇಷ ಮಹತ್ವ ನೀಡುತ್ತಿದ್ದು, ಈ ಬಾರಿಯ ಕಾರಣಿಕೆಯಲ್ಲಿಯೂ ಮುಂಗಾರು ಮಳೆ ಮತ್ತು ಬೆಳೆ ಕುರಿತು ಉಲ್ಲೇಖವಾಗಿರುವುದು ಗಮನ ಸೆಳೆದಿದೆ.

# ರಾಜ್ಯಮಟ್ಟದ ಕಬ್ ಬುಲ್‌ಬುಲ್ ಉತ್ಸವದಲ್ಲಿ ಕಾಕತೀಯ ಶಾಲೆಯ ಮಕ್ಕಳ ಉತ್ತಮ ಪ್ರದರ್ಶನ



ಮಾನ್ವಿ: ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ರಾಜ್ಯ ಸಂಸ್ಥೆ ಹಾಗೂ ಹಾಸನ ಜಿಲ್ಲಾ ಸಂಸ್ಥೆಯ ಸಹಯೋಗದಲ್ಲಿ ಶ್ರವಣಬೆಳಗೊಳದಲ್ಲಿ ಆಯೋಜಿಸಿದ್ದ ರಾಜ್ಯಮಟ್ಟದ ಕಬ್ ಬುಲ್‌ಬುಲ್ ಉತ್ಸವದಲ್ಲಿ ಮಾನ್ವಿ ಪಟ್ಟಣದ ಕಾಕತೀಯ ಶಾಲೆಯ ವಿದ್ಯಾರ್ಥಿಗಳು ವಿವಿಧ ಸ್ಪರ್ಧೆಗಳು ಹಾಗೂ ದೈಹಿಕ ಕಸರತ್ತುಗಳಲ್ಲಿ ಉತ್ತಮ ಪ್ರದರ್ಶನ ನೀಡುವ ಮೂಲಕ ಶಾಲೆ ಮತ್ತು ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿದ್ದ ವಿದ್ಯಾರ್ಥಿಗಳು ಭಾಗವಹಿಸಿದ್ದ ಈ ಉತ್ಸವದಲ್ಲಿ ಕಾಕತೀಯ ಶಾಲೆಯ ಮಕ್ಕಳು ಉತ್ಸಾಹದಿಂದ ಪಾಲ್ಗೊಂಡು ತಮ್ಮ ಪ್ರತಿಭೆ, ಶಿಸ್ತು ಹಾಗೂ ಕೌಶಲವನ್ನು ಪ್ರದರ್ಶಿಸಿದರು. ವಿವಿಧ ಚಟುವಟಿಕೆಗಳಲ್ಲಿ ಮಕ್ಕಳ ಸಕ್ರಿಯ ಭಾಗವಹಿಸುವಿಕೆ ಗಮನ ಸೆಳೆಯಿತು.

ಶಾಲೆಯ ಕಬ್ ಬುಲ್‌ಬುಲ್ ದಳನಾಯಕಿ ವಸುಂದರ ಅವರ ಮಾರ್ಗದರ್ಶನ ಹಾಗೂ ನೇತೃತ್ವದಲ್ಲಿ ವಿದ್ಯಾರ್ಥಿಗಳು ಉತ್ಸವದಲ್ಲಿ ಭಾಗವಹಿಸಿದ್ದರು. ಮಕ್ಕಳಲ್ಲಿ ಆತ್ಮವಿಶ್ವಾಸ, ಧೈರ್ಯ, ಶಿಸ್ತು ಹಾಗೂ ಸಹಕಾರ ಮನೋಭಾವ ಬೆಳೆಸುವ ಉದ್ದೇಶದಿಂದ ಆಯೋಜಿಸಿದ್ದ ವಿವಿಧ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳು ತಮ್ಮ ಸಾಮರ್ಥ್ಯವನ್ನು ಪ್ರದರ್ಶಿಸಿದರು.

ವಿದ್ಯಾರ್ಥಿಗಳ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದ ಕಾಕತೀಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಗೋಡವರ್ತಿ ಸುಬ್ಬರಾವ್ ಚೌಧರಿ, ಕಾರ್ಯದರ್ಶಿ ರಾಮಕೋಟೇಶ್ವರ ರಾವ್ ಹಾಗೂ ಮುಖ್ಯಗುರು ವೀರಭದ್ರಗೌಡ ಅವರು, ರಾಜ್ಯಮಟ್ಟದ ಉತ್ಸವದಲ್ಲಿ ಮಕ್ಕಳು ಉತ್ತಮ ಪ್ರದರ್ಶನ ನೀಡಿರುವುದು ಸಂತಸದ ಸಂಗತಿಯಾಗಿದೆ ಎಂದು ಅಭಿನಂದಿಸಿದರು.

ವಿದ್ಯಾರ್ಥಿಗಳ ಉತ್ಸಾಹ, ಧೈರ್ಯ ಹಾಗೂ ಸಕ್ರಿಯ ಪಾಲ್ಗೊಳ್ಳುವಿಕೆಗೆ ಶಾಲೆಯ ಶಿಕ್ಷಕರು ಮತ್ತು ಪಾಲಕರು ಮೆಚ್ಚುಗೆ ವ್ಯಕ್ತಪಡಿಸಿ, ಮುಂದಿನ ದಿನಗಳಲ್ಲಿಯೂ ಇಂತಹ ಚಟುವಟಿಕೆಗಳಲ್ಲಿ ಭಾಗವಹಿಸಿ ಉತ್ತಮ ಸಾಧನೆ ಮಾಡುವಂತೆ ಶುಭ ಹಾರೈಸಿದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K